ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 252 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 26–04–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 252 | Title- Code: KARKAN 28269 | Chitradurga | Date: 26-04-2024 Friday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಮತದಾರರ ಸ್ವಾಗತಕ್ಕೆ ಸಿಂಗಾರಗೊಂಡ ಮತಗಟ್ಟೆ ಕೇಂದ್ರಗಳು 2
ದಾವಣಗೆರೆ ಲೋಕಸಭೆ 1709244 ಮತದಾರರು 3
ಹರಿಹರ ಬಿಜೆಪಿ ಶಾಸಕರಿಗೆ ಜೀವ ಬೆದರಿಕೆ, ಕ್ರಮಕ್ಕೆ ಆಗ್ರಹ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಚಿತ್ರದುರ್ಗ ಚುನಾವಣೆ ಮಸ್ಟರಿಂಗ್
# ಮತದಾನ ಕಾರ್ಯಕ್ಕೆ ತೆರಳಿದ ಸಿಬ್ಬಂದಿ





» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ 2ನೇ ಹಂತದ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಏಪ್ರಿಲ್ 26 ತಾರೀಖು, ಶುಕ್ರವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯ ವರೆಗೆ ಮತಾದನ ಜರುಗಲಿದೆ. ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಿಗೆ ಮತದಾನ ಕಾರ್ಯಕ್ಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿಯೋಜನೆ ಮಾಡುವ ಮಸ್ಟರಿಂಗ್ ಕಾರ್ಯ ನಗರದ ಸರ್ಕಾರಿ ಕಲಾ ಕಾಲೇಜಿನ ಹೊಸ ಕಟ್ಟಡದಲ್ಲಿ ಗುರುವಾರ ಜರುಗಿತು. ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಮಸ್ಟರಿಂಗ್ ಕಾರ್ಯದ ಉಸ್ತುವಾರಿ ವಹಿಸಿದ್ದರು.

**288 ಮತಗಟ್ಟೆ 1320 ಅಧಿಕಾರಿ ಹಾಗೂ ಸಿಬ್ಬಂದಿ ನೇಮಕ:** ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 288 ಮತಗಟ್ಟೆಗಳು




ಇವೆ. ಶೇ.20 ರಷ್ಟು ಹೆಚ್ಚುವರಿ ಸಿಬ್ಬಂದಿ ಸೇರಿಸಿ, 330 ಪಿ.ಆರ್.ಓ, 330 ಎ.ಪಿ.ಆರ್.ಓ ಹಾಗೂ 660 ಪಿ.ಓ.ಗಳಿಗೆ ಎರೆಡು ಹಂತದ ಮತದಾನ ತರಬೇತಿಯನ್ನು ನೀಡಲಾಗಿದೆ. ಪ್ರತಿ ಮತಗಟ್ಟೆ ಓರ್ವ ಪಿ.ಆರ್.ಓ, ಎ.ಪಿ.ಆರ್.ಓ ಹಾಗೂ ಇಬ್ಬರು ಪಿ.ಓಗಳು ಮತದಾನದ ಕಾರ್ಯನಿರ್ವಹಿಸಲಿದ್ದಾರೆ.

**ಜಿಲ್ಲಾಚುನಾವಣಾಧಿಕಾರಿಹಾಗೂಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭೇಟಿ ಪರಿಶೀಲನೆ:** ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಚುನಾವಣೆ ಆಯೋಗ ಕೈಪಿಡಿಯಲ್ಲಿನ ಚೆಕ್ ಲೀಸ್ಟ್‌ನಂತಯೇ ಮತಗಟ್ಟೆಗಳಿಗೆ ತೆರಳುವ ಅಧಿಕಾರಿ ಹಾಗೂ ಸಿಬ್ಬಂದಿಗೆ ವಿದ್ಯುನ್ಮಾನ ಮತಯಂತ್ರ, ಮತದಾರ ಪಟ್ಟಿ, ಶಾಸನ ಬದ್ಧ ಪುಸ್ತಕಗಳು, ಸ್ಪರ್ಧಿಸುತ್ತಿರುವ ಉಮೇದುವಾರರ ಪಟ್ಟಿ, ದಿನಚರಿ, ವರದಿ, ನಮೂನೆ,ಶಾಹಿ, ಕಂಪಾರ್ಟ್‌ಮೆಂಟ್ ಸೇರಿದಂತೆ ಇತರೆ ಸ್ಟೇಷನರಿ ಕಿಟ್‌ಗಳನ್ನು ಚೆಕ್ ಲೀಸ್ಟ್‌ನ ಕ್ರಮದಲ್ಲಿ ನೀಡಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

**ಎರೆಡು ಬ್ಯಾಲೆಟ್ ಯನಿಟ್ :** ಈ ಬಾರಿ ಚುನಾವಣೆ ಕಣದಲ್ಲಿ 20 ಅಭ್ಯರ್ಥಿಗಳು ಇದ್ದಾರೆ. ಇದರೊಂದಿಗೆ 1 ನೋಟಾ ಕೂಡ ಸೇರಿದೆ. ಹಾಗಾಗಿ ಮತಗಟ್ಟೆ ಸಿಬ್ಬಂದಿ 2 ಬ್ಯಾಲೆಟ್ ಯುನಿಟ್, ಒಂದು ಕಂಟ್ರೋಲ್ ಯುನಿಟ್ ಹಾಗೂ ಒಂದು ವಿವಿಪ್ಯಾಟ್‌ನ್ನು ತಮ್ಮೊಂದಿಗೆ ತೆಗೆದುಕೊಂಡು ಮತಗಟ್ಟೆ ತೆರಳಿದ್ದಾರೆ. ಮತದಾನ ಪ್ರಕ್ರಿಯೆ ಮುಗಿದ ನಂತರ ಏ.26 ರಂದು ಸಂಜೆ ನಗರದ ಸರ್ಕಾರಿ ಕಲಾ ಕಾಲೇಜಿನ ಹೊಸ ಕಟ್ಟಡದ ಡಿ ಮಸ್ಟರಿಂಗ್ ನಡೆಯಲಿದೆ.

**ಊಟ ಹಾಗೂ ಬಸ್ ವ್ಯವಸ್ಥೆ:** ಮಸ್ಟರಿಂಗ್ ಕಾರ್ಯಕ್ಕೆ ನೇಮಿಸಿದ ಅಧಿಕಾರಿ ಸಿಬ್ಬಂದಿಗಳಿಗಾಗಿ ಊಟ ವ್ಯವಸ್ಥೆ ಮಾಡಲಾಗಿತ್ತು. ಊಟದಲ್ಲಿ ಪಾಯಸ, ಅನ್ನ ಸಂಬಾರ್, ಹಪ್ಪಳ, ಉಪ್ಪಿನಕಾಯಿ, ಮಜ್ಜಿಗೆ ನೀಡಲಾಯಿತು. ಸಿಬ್ಬಂದಿ ಮತಗಟ್ಟೆಗಳಿಗೆ ತೆರಳಲು ಅನುಕೂಲವಾಗುವಂತೆ 52 ಕೆ.ಎಸ್.ಆರ್.ಟಿ.ಸಿ ಬಸ್‌ಗಳನ್ನು ನಿಯೋಜಿಸಲಾಗಿದೆ.

## ಎಲ್ಲಾ ಮತಗಟ್ಟೆಗಳಲ್ಲಿ ಪೊಲೀಸ್ ಬಂದೋಬಸ್ತ್

» **ಚಳ್ಳಕೆರೆ**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಯಾವುದೇ ಅಹಿತಕರ ಘಟನೆ ನಡೆಯದಂತೆ ಶಾಂತಿಯುತವಾಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಶಾಂತಿಯುತ ಚುನಾವಣೆ ನಡೆಸಲು ಜಿಲ್ಲಾ ಪೊಲೀಸ್ ಇಲಾಖೆ ಹಲವಾರು ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ ಎಂದು ಹೆಚ್ಚುವರಿ ಜಿಲ್ಲಾ ರಕ್ಷಣಾಧಿಕಾರಿ ಕುಮಾರಸ್ವಾಮಿ ತಿಳಿಸಿದರು. ಅವರು, ನಗರದ ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ಗುರುವಾರ ಚುನಾವಣೆಗೆ ನಿಯೋಜನೆಗೊಂಡ ಇಲಾಖೆ ಸಿಬ್ಬಂದಿ ವರ್ಗಕ್ಕೆ ಮತದಾನ ಪ್ರಕ್ರಿಯೆ ಶಾಂತಿಯುತವಾಗಿ ನಡೆಸುವ ಕುರಿತು ಇಲಾಖೆ ಸಿಬ್ಬಂದಿಗೆ ಹಲವಾರು ನಿರ್ಧಿಷ್ಟ ಸೂಚನೆಗಳನ್ನು ನೀಡಿದರು. ಮತದಾನ ಆರಂಭವಾದ ಮೇಲೆ ಸಾಮಾನ್ಯವಾಗಿ ಮತಗಟ್ಟೆಗಳ ಮುಂದೆ ಜನರು ಆಗಮಿಸಿ ಮತದಾನ ಪ್ರಕ್ರಿಯೆ ಬಗ್ಗೆ ಗಮನಹರಿಸುವರು. ಜೊತೆಯಲ್ಲಿ ಕೆಲ ವ್ಯಕ್ತಿಗಳು ಮತಗಟ್ಟೆ ಮುಂದೆ ಹೆಚ್ಚು ಓಡಾಟ ನಡೆಸುತ್ತಾ ಸಮಸ್ಯೆಗಳನ್ನು ಹುಟ್ಟುಹಾಕಲು ಪ್ರಯತ್ನಿಸುವರು. ಆದ್ದರಿಂದ ಚುನಾವಣಾ ಆಯೋಗದ ಸೂಚನೆಯಂತೆ ಮತಗಟ್ಟೆ ಕೇಂದ್ರಕ್ಕೆ ನಿಯೋಜನೆಗೊಂಡ ಸಿಬ್ಬಂದಿ ವರ್ಗ ನೂರು ಮೀಟರ್ ಅಂತರದಲ್ಲಿ ಯಾರೂ ಸಹ ಇರದಂತೆ ಜಾಗ್ರತೆ ವಹಿಸಬೇಕು. ಮತದಾನ ಮಾಡಲು ಬಂದ ಮತದಾರರಿಗೆ ಸರಥಿ ಸಾಲಿನಲ್ಲಿ ನಿಲ್ಲುವಂತೆ ಮನವಿ ಮಾಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ, ಯಾರೊಡನೆಯೂ ಮಾತಿನ ಚಕಮುಕಿಗೆ ಅವಕಾಶವಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಅನಿರೀಕ್ಷಿತವಾಗಿ ಸಮಸ್ಯೆ ಉಂಟಾದಲ್ಲಿ ಕೂಡಲೇ ಹಿರಿಯ ಅಧಿಕಾರಿಗಳನ್ನು ಅಥವಾ ಮೊಬೈಲ್ ಸ್ಕ್ವಾಡನ್ನು ಸಂಪರ್ಕಿಸುವಂತೆ ಸೂಚಿಸಿದರು.



## ಫಾಸ್ಟ್ ನ್ಯೂಸ್

### ಇಂದು ಮತದಾನ : ಪ್ರತಿಬಂಧಕಾಜ್ಞೆ ಜಾರಿ

» **ಚಿತ್ರದುರ್ಗ**



ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಏ.26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾರರಿಗೆ ಬೆದರಿಕೆ, ಆಸೆ ಆಮಿಷ ಒಡ್ಡುವುದನ್ನು ತಡೆಯಲು ಏಪ್ರಿಲ್ 24 ರಂದು ಸಂಜೆ 6 ಗಂಟೆಯಿಂದ ಏಪ್ರಿಲ್ 26 ರಂದು ಮತದಾನ ಮುಗಿಯುವವರೆಗೆ ಜಿಲ್ಲೆಯಾದ್ಯಂತ ಸಿಆರ್‌ಪಿಸಿ 144 ಸೆಕ್ಷನ್ ಜಾರಿ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಮತದಾನ ಕೊನೆಗೊಳ್ಳುವ 48 ಗಂಟೆಗಳ ಮುನ್ನವೇ ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದೆ. ನಂತರ ಅಭ್ಯರ್ಥಿಗಳು ಮನೆ ಮನೆ ಪ್ರಚಾರ ಕೈಗೊಳ್ಳಬಹುದು. ಕಾನೂನು ಸುವ್ಯವಸ್ಥೆಗೆ ಭಂಗ ತರುವ ಯಾವುದೇ ಕಾರ್ಯಗಳನ್ನು ಯಾರು ಕೂಡ ಮಾಡುವಂತಿಲ್ಲ. 5 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರುವಂತಿಲ್ಲ. ಆದೇಶ ಉಲ್ಲಂಘಿಸುವವರ ವಿರುದ್ಧ ಐಪಿಸಿ ಸೆಕ್ಷನ್ 188ರ ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಇಂದು ಮತದಾನದ ದಿನದಂದು ಸಾರ್ವತ್ರಿಕ ರಜಾದಿನ ಘೋಷಣೆ

» **ಚಿತ್ರದುರ್ಗ**

ಎರೆಡನೇ ಹಂತದ ಲೊಕಸಭೆ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾನದ ದಿನವನ್ನು ಸಾರ್ವತ್ರಿಕ ರಜಾದಿನವನ್ನಾಗಿ ಘೋಷಣೆ ಮಾಡಲಾಗಿದೆ. ಅಂದು ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಕಂಪನಿಗಳು ಸಹ ಉದ್ಯೋಗಿಗಳಿಗೆ ರಜೆ ನೀಡಲಿವೆ. ಅಗತ್ಯ ಸೇವೆ ಹಾಗೂ ಮತದಾನ ಪ್ರಕ್ರಿಯಲ್ಲಿ ಕರ್ತವ್ಯ ನಿತರಾಗಿರುವ ಸಿಬ್ಬಂದಿ ಹೊರತು ಪಡಿಸಿ ಎಲ್ಲಾ ಅರ್ಹ ಮತದಾರರು ಏಪ್ರಿಲ್ 26 ರಂದು ಮತಗಟ್ಟೆಗಳಿಗೆ ತೆರಳಿ ತಪ್ಪದೇ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕೋರಿದ್ದಾರೆ.

### ಮೇ.6 ಮತ್ತು 7ರಂದು ಕೃಷಿ ಪ್ರಾಯೋಗಿಕ ತರಬೇತಿ

» **ಚಿತ್ರದುರ್ಗ**

2024–25ನೇ ಸಾಲಿಗೆ ಕೃಷಿ ಕೋಟಾದಡಿ ರಾಜ್ಯದ ಕೃಷಿ ಹಾಗೂ ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳಿಗೆ ಸ್ನಾತಕ ಪದವಿಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಮೇ.6 ಮತ್ತು 7ರಂದು ನಗರದ ಎ.ಪಿ.ಎಂ.ಸಿ ಆವರಣದ ಕೃಷಿ ತಂತ್ರಜ್ಞರಸಂಸ್ಥೆಯಲ್ಲಿಪ್ರಾಯೋಗಿಕತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.ತರಬೇತಿಯಲ್ಲಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ, ಅರಣ್ಯ, ರೇಷ್ಮೆ,ಹಣ್ಣು, ತರಕಾರಿ, ಬಿತ್ತನೆ ಬೀಜ, ಆಹಾರ ಧಾನ್ಯ, ಕೃಷಿ ಪರಿಕರಗಳ ಬಗ್ಗೆ ಪರಿಚಯಿಸಲಾಗುತ್ತದೆ. ಕೃಷಿಮತ್ತುಕೃಷಿಸಂಬಂಧಿತ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕ ಪದವಿಗಳಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಮೇ.5ರೊಳಗೆ ಕೃಷಿ ತಂತ್ರಜ್ಞರ ಸಂಸ್ಥೆಯ ಕಛೇರಿಯಲ್ಲಾಗಲಿ ಅಥವಾ 9742455666 ಸಂಖ್ಯೆಗೆ ಫೋನ್ ಪೇ ಮೂಲಕವಾಗಲೀ ರೂ.700/– ಪಾವತಿಸಿ ಹೆಸರು ನೊಂದಾಯಿಸಿಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಕಾರ್ಯದರ್ಶಿ ದೂರವಾಣಿ ಸಂಖ್ಯೆ: 9742455666 ಅಥವಾ ಖಜಾಂಚಿ ದೂರವಾಣಿ ಸಂಖ್ಯೆ: 9448656231 ಗೆ ಸಂಪರ್ಕಿಸಬಹುದು ಎಂದು ಐ.ಎ.ಟಿ ಸಂಸ್ಥೆ ಅಧ್ಯಕ್ಷ ಜಿ.ಸಿ. ರಂಗಸ್ವಾಮಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಚಿತ್ರದುರ್ಗ ಲೋಕಸಭಾ ಕ್ಷೇತ್ರ : 260 ಮತಗಟ್ಟೆ ಕೇಂದ್ರ

# ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ 2,24,447 ಮತದಾರರು

## 1180 ಸಿಬ್ಬಂದಿ ನಿಯೋಜನೆ; ಶಾಂತಿಯುತ ಮತದಾನಕ್ಕೆ ಸಹಾಯಕ ಚುನಾವಣಾಧಿಕಾರಿ ಮನವಿ

» **ಚಳ್ಳಕೆರೆ**

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಏ.26ರಂದು ನಡೆಯುವ ಮತದಾನಕ್ಕೆ ಎಲ್ಲಾ ರೀತಿಯ ಸರ್ವಸಿದ್ಧತೆಗಳನ್ನು ಪೂರ್ಣಗೊಳಿಸಿದ್ದು, ಕ್ಷೇತ್ರದ 260 ಮತಗಟ್ಟೆಗಳಿಗೆ ಈಗಾಗಲೇ ಸಂಬಂಧಪಟ್ಟ ಎಲ್ಲಾ ಸಾಮಾನುಸರಂಜಾಮು, ದಾಖಲಾತಿಗ'ಳ'ೊಂದಿಗ' ನಿಯೋಜನೆಗೊಂಡ ಅಧಿಕಾರಿ ಸಿಬ್ಬಂದಿ ವರ್ಗ ತೆರಳಿದ್ದಾರೆ. ಏ.26 ಶುಕ್ರವಾರ ಬೆಳಗ್ಗೆ 7ಗಂಟೆಯಿಂದ ಮತದಾನ ಪ್ರಕ್ರಿಯೆ ಆರಂಭವಾಗಲಿದೆ ಎಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ತಿಳಿಸಿದರು.

ಅವರು, ನಗರದ ಎಚ್‌ಪಿಪಿಸಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಮತದಾನ ಪ್ರಕ್ರಿಯೆ ಸಂಬಂಧಪಟ್ಟಂತೆ ಸಿದ್ದತೆಗಳನ್ನು ಪರಿಶೀಲಿಸಿ ಮಾತನಾಡಿದರು. ಪ್ರತಿ ಚುನಾವಣಾ ಸಂದರ್ಭದಲ್ಲಿ ಚುನಾವಣಾ ಸಿಬ್ಬಂದಿಗೆ ಊಟ ಮತ್ತು ಉಪಹಾರದ ವ್ಯವಸ್ಥೆಯನ್ನು ಒಂದೇ




ಕಡೆ ಮಾಡಲಾಗುತ್ತಿತ್ತು. ಇದರಿಂದ ನಿಯೋಜನೆಗೊಂಡ ಸಿಬ್ಬಂದಿಗೆ ಕಸಿವಿಸಿಜೊತೆಗೆ ತೊಂದರೆ ಆಗುತ್ತಿತ್ತು. ಈ ಹಿನ್ನೆಲೆಯಲ್ಲಿ ಈ ಬಾರಿಯ ಚುನಾವಣೆಯಲ್ಲಿ ಸೆಕ್ಟರ್ ವಹಿ ಉಪಹಾರ ಮತ್ತು ಬೋಜನವನ್ನು ಸಂಬಂಧಪಟ್ಟ ಸೆಕ್ಟರ್ ಅಧಿಕಾರಿಗಳ ಮೂಲಕ ವಿತರಣೆ ಮಾಡಲಾಗಿದೆ.

ವಿಶೇಷ ಊಟ :– ಈ ಬಾರಿ ವಿಶೇಷ ಊಟ ವ್ಯವಸ್ಥೆ ಮಾಡಲಾಗಿದ್ದು, ಗುಣಮಟ್ಟದ ಕಂಪಾರ್ಟ್‌ಮೆಟ್ ಇರುವ ಪ್ಲಾಸ್ಟಿಕ್ ಪ್ಲೇಟ್‌ನಲ್ಲಿ ಮೊಸರನ್ನ, ಬಿಳಿ ಅನ್ನ, ಸಂಬಾರ್, ಮಜ್ಜಿಗೆ, ಒಂದು ಸಿಹಿ ಪಾಕೇಟ್, ಕುಡಿಯುವ ನೀರು ಜೊತೆಯಲ್ಲಿ ಹೆಚ್ಚುವರಿಯಾಗಿ ಡ್ರೈಪ್ರೂಟ್ಸ್, ಬಿಸ್ಕತ್, ಸ್ನ್ಯಾಕ್ಸ್ ನೀಡಲಾಗಿದೆ. ಸಿಬ್ಬಂದಿ ವರ್ಗವೂ ಸಹ ಸಂತೋಷದಿಂದಲೇ ಎಲ್ಲವನ್ನು ಸ್ವೀಕರಿಸಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚುನಾವಣೆಗೆ ಸಂಬಂಧಿಸಿದಂತೆ 260 ಮತಗಟ್ಟೆಗಳಲ್ಲಿ ಗಂಡು 111280, ಮಹಿಳೆ 113160, 7 ತೃತೀಯ ಲಿಂಗ ಸೇರಿ ಒಟ್ಟು 2,24,447 ಮತದಾರರು ಮತದಾನ ಹಕ್ಕು ಪಡೆದಿದ್ದಾರೆ. 260 ಮತಗಟ್ಟೆಗಳಲ್ಲಿ 1180 ಸಿಬ್ಬಂದಿ ವರ್ಗ ಕಾರ್ಯನಿರ್ವಹಿಸಲಿದ್ದು ಅದರಲ್ಲಿ 5 ಸಖಿ ಬೂತ್, ಒಂದು ವಿಕಲಚೇತನ, ಒಂದು ಯುವ ಮತದಾನ ಕೇಂದ್ರ, ಒಂದು ಬುಡಕಟ್ಟು ಸಮುದಾಯದ ಮತಗಟ್ಟೆ ಕೇಂದ್ರವನ್ನು ಸಿದ್ದಪಡಿಸಿದೆ.

ಚಳ್ಳಕೆರೆ ನಗರದ ಕಾಟಪ್ಪನಹಟ್ಟಿ, ಉರ್ದುಶಾಲೆ, ಪರಶುರಾಮಪುರ, ಸಿದ್ದಾಪುರ, ಹುಲಿಕುಂಟೆ ಗ್ರಾಮಗಳಲ್ಲಿ ಸಖಿ ಬೂತ್, ನಗರದ ವಿಶ್ವಭಾರತಿ ಶಾಲೆಯಲ್ಲಿ ವಿಕಲಚೇತನರ ಮತಗಟ್ಟೆ ಸಿದ್ದಪಡಿಸಿದೆ. ಯುವ ಮತದಾನ ಕೇಂದ್ರ ನಗರದ ನವಚೇತನ ಶಾಲೆ, ಬುಡಕಟ್ಟು ಸಮುದಾಯ ಮತಗಟ್ಟೆ ಕೇಂದ್ರ ನನ್ನಿವಾಳದಲ್ಲಿ ಸಿದ್ದಪಡಿಸಿದೆ. ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿಯನ್ನು ಮತಗಟ್ಟೆಗಳಿಗೆ ಸುರಕ್ಷಿತವಾಗಿ ಸಾಮಾಗ್ರಿಗಳೊಂದಿಗೆ ಸಾಗಿಸಲು 60 ಮಾರ್ಗ, 53 ಕೆಎಸ್‌ಆರ್‌ಟಿಸಿ ಬಸ್‌ಗಳು, 3 ಜೀಫ್ ವಾಹನಗಳನ್ನು ಚುನಾವಣಾ ಕಾರ್ಯಕ್ಕೆ ಸಿದ್ದಪಡಿಸಿದೆ. ಚಳ್ಳಕೆರೆ ನಗರದಲ್ಲಿ ಒಟ್ಟು 49 ಮತಗಟ್ಟೆಗಳಿದ್ದು, ಮತಗಟ್ಟೆ ಸಂಖ್ಯೆ 91 ಸಹಾಯಕ ಕೃಷಿ ನಿರ್ದೇಶಕ ಕಚೇರಿ ಒಟ್ಟು 1513 ಮತದಾರರಿದ್ದು ಅತಿಹೆಚ್ಚು ಮತದಾರರನ್ನು ಹೊಂದಿರುವ ಕೇಂದ್ರವಾಗಿದೆ. ಮತಗಟ್ಟೆ ಸಂಖ್ಯೆ 98 ವಿಶ್ವಭಾರತಿ ಶಾಲೆ 472 ಮತದಾರರನ್ನು ಹೊಂದಿದ್ದು, ಅತಿ ಕಡಿಮೆ ಮತದಾರರ ಕೇಂದ್ರವಾಗಿದೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಕೆ.ಎ.ಎಸ್ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ತರಬೇತಿ ಕೇಂದ್ರದ ವತಿಯಿಂದ ಕರ್ನಾಟಕಲೋಕಸೇವಾಆಯೋಗವುನಡೆಸಲಿರುವ ಕೆ.ಎ.ಎಸ್ ಮತ್ತು ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಛೇರಿಯಲ್ಲಿ ನೀಡಲಾಗುವುದು. ಆಸಕ್ತರು ಇದೇ ಏಪ್ರಿಲ್ 30ರ ಸಂಜೆ 4.30ರೊಳಗೆ ತಮ್ಮ ಹೆಸರನ್ನು ದೂರವಾಣಿ ಸಂಖ್ಯೆ: 0821-2515944 ಗೆ ಸಂಪರ್ಕಿಸಿ ನೊಂದಾಯಿಸಿಕೊಳ್ಳಬಹುದು ಎಂದು ವಿ.ವಿ.ಕುಲಸಚಿವ ಪ್ರೊ ಕೆ. ಪ್ರವೀಣ್ ತಿಳಿಸಿದ್ದಾರೆ.

### ಮತ ಮಾರಾಟ ಮಾರಿ ಕೊಳ್ಳಬೇಡಿ: ಸ್ವಾಮೀಜಿ

» ಚಿತ್ರದುರ್ಗ

ಮತದಾನ ಎಂಬುದು ಈ ದೇಶದ ಸ್ವತಂತ್ರ ಸಾರ್ವಭೌಮ ಹಾಗೂ ಸ್ವಾಭಿಮಾನದ ಸಂಕೇತವಾಗಿ ಮತದಾನವನ್ನು ಮಾಡುವ ಪ್ರತಿಯೊಬ್ಬ ಜವಾಬ್ದಾರಿ ಭಾರತೀಯರ ಮೇಲಿದೆ. ಮತವನ್ನು ಮಾರಾಟ ಮಾಡಿಕೊಳ್ಳಬೇಡಿ ಎಂದು ಹಿರಿಯೂರು ತಾಲೂಕು ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ಬಸವ ಹರಳಯ್ಯ ಸ್ವಾಮೀಜಿ ಮತದಾರರಿಗೆ ಕರೆ ನೀಡಿದ್ದಾರೆ. ಮತವನ್ನು ಮಾರಾಟ ಮಾಡಿಕೊಂಡರೆ ನಿಮ್ಮನ್ನು ನೀವೇ ಮಾಡಿಕೊಂಡಂತೆ. ಯಾವ ವ್ಯಕ್ತಿ ದೇವರ ಹೆಸರಲ್ಲಿ ಧರ್ಮದ ಹೆಸರಲ್ಲಿ ಜಾತಿಯ ಹೆಸರಲ್ಲಿ ಆಮಿಷಗಳ ಹೆಸರಲ್ಲಿ ಮತವನ್ನು ಯಾಚಿಸುತ್ತವನು ಅಂತವನಿಗೆ ಮತವನ್ನು ಹಾಕಬೇಡಿ . ಯಾವ ವ್ಯಕ್ತಿ ಸಂವಿಧಾನ ರಕ್ಷಣೆಗಾಗಿ ಸಂವಿಧಾನದ ಆಶಯಗಳಿಗಾಗಿ ಸಮಾಜದ ಸರ್ವತೋ ಅಭಿವೃದ್ಧಿಗಾಗಿ ಮತವನ್ನು ಯಾಚಿಸುತ್ತಾನೆ ಅವನಿಗೆ ಮತವನ್ನು ಹಾಕಿ ಕಾರಣ ಸಂವಿಧಾನ ನಮ್ಮ ನಿಮ್ಮೆಲ್ಲರ ರಕ್ಷಣಾ ಕವಚ ಈ ರಕ್ಷಣಾ ಕವಚವನ್ನು ನಾವು ಸದಾ ಧರಿಸಿರಬೇಕು. ಇಲ್ಲವಾದರೆ ಅಪಾಯ ಆಪತ್ತು ನಿಶ್ಚಿತ . ಸಂವಿಧಾನವನ್ನು ನಾವು ರಕ್ಷಿಸಿದರೆ, ಸಂವಿಧಾನ ನಮ್ಮನ್ನು ರಕ್ಷಿಸುತ್ತದೆ ಎಂದು ತಿಳಿಸಿದ್ದಾರೆ.

### ಇಂದು ಹರಿಹರ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಭಾ ಪರ ಪ್ರಚಾರ

» ದಾವಣಗೆರೆ

ದಾವಣಗೆರೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ ಪರ ಏಪ್ರಿಲ್ 26ರಂದು ಕಾಂಗ್ರೆಸ್ ಮುಖಂಡ ನಾಗರಾಜ್ ಹೆಚ್. ಶಿವಪ್ಪ ನೇತೃತ್ವದಲ್ಲಿ ಹರಿಹರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣಾ ಪ್ರಚಾರ ನಡೆಯಲಿದೆ. ಕಾಂಗ್ರೆಸ್ ಮುಖಂಡರುಗಳಾದ ವಾಗೀಶ್ ಸ್ವಾಮಿ, ನಂದಿಗಾವಿ ಶ್ರೀನಿವಾಸ್, ರಾಮಪ್ಪ ಭಾಗವಹಿಸಿ ಪ್ರಚಾರ ನಡೆಸುವರು. ಬೆಳಗ್ಗೆ 8ಕ್ಕೆ ಗುತ್ತೂರು, 8.30ಕ್ಕೆ ಗಂಗನರಸಿ, 9 ಕ್ಕೆ ದಿಟೂರು, 9.30ಕ್ಕೆ ಪಾಮೇನಹಳ್ಳಿ, 10ಕ್ಕೆ ಸಾರಥಿ, 10.30ಕ್ಕೆ ಚಿಕ್ಕಬಿದರಿ, 11ಕ್ಕೆ ಕರಲ್ಲಹಳ್ಳಿ, 11.30ಕ್ಕೆ ಕುರುಬರಹಳ್ಳಿ, 12ಕ್ಕೆ ಕೆಂಚನಹಳ್ಳಿ, 12.30ಕ್ಕೆ ವಟಗನಹಳ್ಳಿ, 1ಕ್ಕೆ ಬಳ್ಳಾಪುರ, 1.30ಕ್ಕೆ ಕೊಂಡಜ್ಜಿ, 2ಕ್ಕೆ ದೊಗ್ಗಳ್ಳಿ, 2.30ಕ್ಕೆ ಕೋಡಿಹಳ್ಳಿ, 3 ಕ್ಕೆ ಅಮರಾವತಿ ಈ ಭಾಗಗಳಲ್ಲಿ ಮತ ಪ್ರಚಾರ ನಡೆಯಲಿದೆ.

### ಮಾಯಕೊಂಡ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರ



» ದಾವಣಗೆರೆ

ಮಾಯಕೊಂಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ದಾವಣಗೆರೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ ಪರ ಕಾಂಗ್ರೆಸ್ ಮುಖಂಡರುಗಳಾದ ನಾಗರಾಜ್ ಹೆಚ್. ಶಿವಪ್ಪ ನೇತೃತ್ವದಲ್ಲಿ ಬಿರುಸಿನ ಚುನಾವಣಾ ಪ್ರಚಾರ ನಡೆಸಿದರು. ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾಗಿದ್ದ ವಾಗೀಶ್ ಸ್ವಾಮಿ ಸಾಥ್ ನೀಡಿದ್ದರು. ಮಾಯಕೊಂಡ ವಿಧಾನಸಭಾ ಕ್ಷೇತ್ರದ ಕಾಶಿಪುರ ಗ್ರಾಮದಲ್ಲಿ ದಾವಣಗೆರೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ ಪರವಾಗಿ ಮತಯಾಚಿಸಿ ಕಾಂಗ್ರೆಸ್ ಕೈ ಹಿಡಿಯುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಎನ್. ಎಂ. ಆಂಜನೇಯ, ಲಿಂಗರಾಜ್ ಮುತ್ತಗಿ, ಪೇಪರ್ ಚಂದ್ರಣ್ಣ, ವಿಜಕುಮಾರ್, ನಿಜಲಿಂಗಪ್ಪ ಮತ್ತು ಕಾಶಿಪುರ ಗ್ರಾಮದ ಮುಖಂಡರು ಗ್ರಾಮಸ್ಥರು ಭಾಗವಹಿಸಿದ್ದರು.

### 26ಕ್ಕೆ ವಿಶ್ವಕರ್ಮ ಸಮಾಜದಿಂದ ವಿವಾಹ

» ದಾವಣಗೆರೆ

ವಿಶ್ವಕರ್ಮ ಸಮಾಜ ಸಂಘ ಹಾಗೂ ಜಿಲ್ಲೆಯ ವಿಶ್ವಕರ್ಮ ಸಮಾಜದ ಎಲ್ಲಾ ಸಂಘಸಂಸ್ಥೆಗಳ ಸಹಯೋಗದೊಂದಿಗೆ ಇದೇ ಏ.26 ರಂದು ನಗರದ ಶ್ರೀ ಕಾಳಿಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ 41ನೇ ವರ್ಷದ ಸಾಮೂಹಿಕ ಉಪನಯನ ಮತ್ತು ವಿವಾಹ ಮಹೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

### ಮತದಾರರ ಸ್ವಾಗತಕ್ಕೆ ಸಿಂಗಾರಗೊಂಡ ಮತಗಟ್ಟೆ ಕೇಂದ್ರಗಳು

# ಜಿಲ್ಲೆಯಾದ್ಯಂತ 54 ವಿಶೇಷ ಮತಗಟ್ಟೆಗಳ ಸ್ಥಾಪನೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಇದೇ ಏ.26ರಂದು ಶುಕ್ರವಾರ ಮತದಾನ ನಡೆಯಲಿದೆ. ಈ ಹಿನ್ನಲೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು, ಮತದಾರರನ್ನು ಆಕರ್ಷಿಸಲು ಜಿಲ್ಲೆಯಾದ್ಯಂತ 54 ಮತಗಟ್ಟೆ ಕೇಂದ್ರಗಳನ್ನು ವಿವಿಧ ಮಾದರಿಗಳಲ್ಲಿ ಸಿಂಗಾರಗೊಳಿಸಿದ್ದು, ಅಲಂಕೃತ ಮತಗಟ್ಟೆಗಳು ಮತದಾರರನ್ನು ಕೈ ಬೀಸಿ ಕರೆಯುತ್ತಿವೆ.









ಪ್ರಜಾಪ್ರಭುತ್ವದ ಹಬ್ಬ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಜಿಲ್ಲೆಯಲ್ಲಿ ವಿಶೇಷ ವಿನ್ಯಾಸದಲ್ಲಿ ಸಖಿ ಮತಗಟ್ಟೆ, ವಿಶೇಷ ಚೇತನರ ಮಾದರಿ ಮತಗಟ್ಟೆ, ಯುವ ಮತಗಟ್ಟೆ, ಸಂಪ್ರಾದಾಯಿಕ ಮತಗಟ್ಟೆ ಹಾಗೂ ವಿಷಯಾಧಾರಿತ (ಥೀಮ್) ಮತಗಟ್ಟೆಗಳು ಸಿಂಗಾರಗೊಂಡು ಕಂಗೊಳಿಸುತ್ತಿವೆ.

ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಮತದಾರರನ್ನು ಆಕರ್ಷಿಸುವ ನಿಟ್ಟಿನಲ್ಲಿ 54 ವಿಶೇಷ ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ. ಮಹಿಳಾ ಮತದಾರರನ್ನು ಉತ್ತೇಜಿಸಲು ಪ್ರತಿ ವಿಧಾನಸಭಾ ಕ್ಷೇತ್ರವಾರು, ಮಹಿಳಾ ಮತದಾರರು ಹೆಚ್ಚಿರುವ ಕಡೆ 5 ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ ಮತಗಟ್ಟೆಗಳಲ್ಲಿ ಮಹಿಳಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಚುನಾವಣಾ ಕಾರ್ಯ ನಿರ್ವಹಿಸುವರು. ಇದೇ ಮಾದರಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ರಂತೆ ವಿಶೇಷ ಚೇತನರ ಮತಗಟ್ಟೆ, ಯುವ ಮತಗಟ್ಟೆ, ವಿಷಯಾಧಾರಿತ ಹಾಗೂ ಸ್ಥಳೀಯ ಇತಿಹಾಸ, ಪರಂಪರೆ, ಸಂಸ್ಕೃತಿ ಬಿಂಬಿಸುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

**ಸಿಂಗಾರಗೊಂಡ ಸಖಿ ಮತಗಟ್ಟೆಗಳು:** ಮಹಿಳಾ ಮತದಾರರಿಗಾಗಿ ತೆರೆಯಲಾಗಿರುವ ಸಖಿ ಮತಗಟ್ಟೆಗಳು ತಳಿರು-ತೋರಣ, ರಂಗೋಲಿ, ಹೂ-ಗಿಡ ಅಲಂಕಾರದೊಂದಿಗೆ ಸಿಂಗಾರಗೊಂಡು ಮತದಾರರನ್ನು ಸ್ವಾಗತಿಸುತ್ತಿವೆ.

ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದ ಕೋನಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರಾಂಪುರ ಗ್ರಾಮ ಪಂಚಾಯಿತಿ ಕಚೇರಿ, ಮೇಗಳಹಟ್ಟಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ (ಹೊಸ ಕಟ್ಟಡ), ಮೊಳಕಾಲ್ಮುರು ದುರ್ಗ ಪ್ರೌಢಶಾಲೆ, ಕೊಂಡ್ಲಹಳ್ಳಿ ಸರ್ಕಾರಿ ಕನ್ನಡ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದ ಕಾಟಪ್ಪನಹಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಳ್ಳಕೆರೆ ನಗರದ ಸರ್ಕಾರಿ ಮಾದರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಪರಶುರಾಂಪುರ, ಸಿದ್ದಾಪುರ ಹಾಗೂ ಹುಲಿಕುಂಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಗೋನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಎಂ.ಕೆ.ಹಟ್ಟಿ, ಹೊರಪೇಟೆ ಸಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಮಾಳಪ್ಪನಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಕೆಳಗೋಟೆಯ ಸಂತ ಜೋಸೆಫರ ಕಾನ್ವೆಂಟ್ ಶಾಲೆಯಲ್ಲಿ ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಬುರುಜನರೊಪ್ಪ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಹರಿಯಬ್ಬೆ ಸರ್ಕಾರಿ ಪಿಯು ಕಾಲೇಜು, ಬಬ್ಬೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಹಿರಿಯೂರು ನೆಹರು ಮೈದಾನ ಕನ್ನಡ ಹಿರಿಯ ಪ್ರಾಥಮಿಕ ಶಾಲೆ, ಜವನಗೊಂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗ ವಿಧಾನಸಭಾ ಕ್ಷೇತ್ರದ ದೇವಿಗೆರೆ, ಹೊನ್ನೇನಹಳ್ಳಿ ಬಾಗೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗ ತಾಲ್ಲೂಕು ಪಂಚಾಯತ್ ಸಭಾ ಭವನ, ಕಿಟ್ಟದಾಳ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ ಮಲ್ಲಾಡಿಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಳಲ್ಕೆರೆ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಮತ್ತು ಉರ್ದು ಶಾಲೆ, ಅರೇಹಳ್ಳಿ, ಮಾಲೇನಹಳ್ಳಿ ತಿರುಮಲಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

**ವಿಶೇಷಚೇತನರ ಮಾದರಿ ಮತಗಟ್ಟೆ:** ವಿಶೇಷ ಚೇತರನ ಮತದಾನವನ್ನು ಪ್ರೋತ್ಸಾಯಿಸುವ ಸಲುವಾಗಿ ವಿಕಲಚೇತನರ ಮಾದರಿ ಮತಗಟ್ಟೆ ಸ್ಥಾಪಿಸಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರವಾರು ತಲಾ 1 ವಿಶೇಷ ಚೇತನರ ಮಾದರಿ ಮತಗಟ್ಟೆ ಸ್ಥಾಪಿಸಲಾಗಿದ್ದು, ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 6 ವಿಶೇಷಚೇತನರ ಮಾದರಿ ಮತಗಟ್ಟೆ ಸ್ಥಾಪಿಸಲಾಗಿದೆ. ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ ಎದ್ದಲು ಬೊಮ್ಮಯ್ಯನಹಟ್ಟಿಯ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಚಳ್ಳಕೆರೆ ನಗರದ ಟಿ.ಆರ್.ನಗರದ ವಿಶ್ವಭಾರತಿ ಹಿರಿಯ ಪ್ರಾಥಮಿಕ ಶಾಲೆ, ಚಿತ್ರದುರ್ಗ ನಗರದ ವಿ.ಪಿ.ಬಡಾವಣೆಯ 1ನೇ ಕ್ರಾಸ್‌ನ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಹಿರಿಯೂರು ತಾಲ್ಲೂಕು ಕೂನಿಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗ ಸಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ಹೊಳಲ್ಕೆರೆಯ ತಾಳ್ಯದ ಚಿಗಟೇರಪ್ಪ ಬಾಲಕಿಯರ ಪ್ರೌಢಶಾಲೆಯಲ್ಲಿ ವಿಶೇಷ ಚೇತನರ ಮಾದರಿ ಮತಗಟ್ಟೆ ಸ್ಥಾಪಿಸಲಾಗಿದೆ.

**ಯುವ ಮತಗಟ್ಟೆ:** ಪ್ರತಿ ವಿಧಾನಸಭಾ ಕ್ಷೇತ್ರವಾರು ತಲಾ 1 ಯುವ ಜನರ ಮತಗಟ್ಟೆ ಸ್ಥಾಪಿಸಲಾಗಿದ್ದು, ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 6 ಯುವ ಮತಗಟ್ಟೆ ಸ್ಥಾಪಿಸಲಾಗಿದೆ. ಮೊಳಕಾಲ್ಮುರು ಬಿಇಒ ಕಚೇರಿಯ ಆವರಣದ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆ, ಚಳ್ಳಕೆರೆ ನಗರದ ಟಿ.ಆರ್.ನಗರದ ನವಚೇತನ ಹಿರಿಯ ಪ್ರಾಥಮಿಕ ಶಾಲೆ, ಚಿತ್ರದುರ್ಗ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದ ಸರ್ಕಾರಿ ಮೇನ್ ಹಿರಿಯ ಪ್ರಾಥಮಿಕ ಶಾಲೆ, ಹಿರಿಯೂರು ಅಂಬಳಗೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗ ಜನರಲ್ ಕರಿಯಪ್ಪ ಮೆಮೊರಿಯಲ್ ಹಿರಿಯ ಪ್ರಾಥಮಿಕ ಶಾಲೆ, ಹೊಳಲ್ಕೆರೆಯ ಅರಸನಘಟ್ಟದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಯುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

**ಎಥ್ನಿಕ್ ಮತಗಟ್ಟೆ:** ಸ್ಥಳೀಯ ಇತಿಹಾಸ, ಪರಂಪರೆ, ಸಂಸ್ಕೃತಿ ಬಿಂಬಿಸುವ ಸಂಪ್ರಾದಾಯಿಕ(ಎಥ್ನಿಕ್)ಮತಗಟ್ಟೆಗಳನ್ನು ಪ್ರತಿ ವಿಧಾನಸಭಾ ಕ್ಷೇತ್ರವಾರು ತಲಾ 1 ಎಥ್ನಿಕ್ ಮತಗಟ್ಟೆಸ್ಥಾಪಿಸಲಾಗಿದ್ದು, ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 6 ಎಥ್ನಿಕ್ ಮತಗಟ್ಟೆ ಸ್ಥಾಪಿಸಲಾಗಿದೆ.

ಮೊಳಕಾಲ್ಮುರು ತಾಲ್ಲೂಕು ಕೆಳಗಿನ ಕಣಿವೆಯ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ, ಚಳ್ಳಕೆರೆ ನನ್ನಿವಾಳದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಿತ್ರದುರ್ಗನಗರದಮದಕರಿಪುರಜಿಂದಲ್ ಪ್ರೌಢಶಾಲೆ, ಹಿರಿಯೂರು ವದ್ದಿಕೆರೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗದ ಕಸಪ್ಪನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಳಲ್ಕೆರೆಯ ಮಂಜುನಾಥ್ ಪ್ರೌಢಶಾಲೆಯಲ್ಲಿ ಎಥ್ನಿಕ್ ಮತಗಟ್ಟೆ ಸ್ಥಾಪಿಸಲಾಗಿದೆ.

**ವಿಷಯಾಧಾರಿತ ಮತಗಟ್ಟೆ:** ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1ರಂತೆ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 6 ವಿಷಯಾಧಾರಿತ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ಮೊಳಕಾಲ್ಮುರು ಸರ್ಕಾರಿ ಪದವಿಪೂರ್ವ ಕಾಲೇಜು, ಚಳ್ಳಕೆರೆಯ ಸೋಮಗುದ್ದು ರಸ್ತೆಯ ಸರ್ಕಾರಿ ಪಿಯು ಕಾಲೇಜು, ಚಿತ್ರದುರ್ಗ ನಗರದ ಕೆಳಗೋಟೆಯ ಸರಸ್ವತಿ ಕಾನೂನು ಕಾಲೇಜು, ಹಿರಿಯೂರು ಹರಿಶ್ಚಂದ್ರ ಘಾಟ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹೊಸದುರ್ಗ ಮಧುರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಹೊಳಲ್ಕೆರೆ ಪಟ್ಟಣದ ಬಸ್ ನಿಲ್ದಾಣದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ವಿಷಯಾಧಾರಿತ ಮತಗಟ್ಟೆ ಸ್ಥಾಪಿಸಲಾಗಿದೆ.

**ನೆರಳಿನ ವ್ಯವಸ್ಥೆ:** ಬೇಸಿಗೆ ಹಿನ್ನಲೆಯಲ್ಲಿ ಮತದಾನಕ್ಕೆಬರುವ ಮತದಾರರಿಗೆ ನೆರಳಿನ ವ್ಯವಸ್ಥೆ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನೂ ಕಲ್ಪಿಸಲಾಗಿದೆ. ಮತಗಟ್ಟೆಗಳ ಹೊರಗೆ ಶಾಮಿಯಾನ ಜೊತೆಗೆ ತೆಂಗಿನ ಗರಿಗಳನ್ನು ಬಳಸಿ ಸಾಂಪ್ರಾದಾಯಕವಾದ ಚಪ್ಪರವನ್ನೂ ಹಾಕಿ ಜಿಲ್ಲಾಡಳಿತದ ವತಿಯಿಂದ ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ.

## ಆಕ್ಯುಪ್ರೆಷರ್ ಮತ್ತು ವೈಬ್ರೇಷನ್ ಥೆರಪಿ ಶಿಬಿರ



» ಚಳ್ಳಕೆರೆ

ರೋಟರಿ ಕ್ಲಬ್ ಕಳೆದ ಹಲವಾರು ವರ್ಷಗಳಿಂದ ಸಾರ್ವಜನಿಕರ ಆರೋಗ್ಯವನ್ನು ಸದೃಢವಾಗಿಡುವ ನಿಟ್ಟಿನಲ್ಲಿ ವಿವಿಧ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸುವ ಮೂಲಕ ಜನರ ಆರೋಗ್ಯವನ್ನು ಕಾಪಾಡುತ್ತಿದೆ. ಆಕ್ಯುಪ್ರೆಷರ್ ಮತ್ತು ವೈಬ್ರೇಷನ್ ಥೆರಪಿ ಶಿಬಿರವನ್ನುಹಮ್ಮಿಕೊಂಡಿದ್ದು,ಇದರಸದುಪಯೋಗವನ್ನು ಪಡೆದುಕೊಳ್ಳಲು ಮುಂದಾಗಬೇಕೆಂದು ಹಿರಿಯ ರೋಟೇರಿಯನ್ ಡಾ.ಕೆ.ಎಂ.ಜಯಕುಮಾರ್ ತಿಳಿಸಿದರು. ಅವರು, ಗುರುವಾರ ರೋಟರಿ ಬಾಲಭವನದಲ್ಲಿ ರೋಟರಿ ಕ್ಲಬ್, ಇನ್ನರ್ ವ್ಹೀಲ್ ಕ್ಲಬ್, ರಾಜಸ್ಥಾನದ ನ್ಯಾಚುರಲ್ ಹೆಲ್ತ್ ಕ್ಯಾಪ್ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಐದು ದಿನಗಳ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ರಾಜಸ್ಥಾನದ ಡಾ.ರಾಮಮನೋಹರ ಲೋಹಿಯಾ ಆರೋಗ್ಯ ಜೀವನ್‌ಸಂಸ್ಥಾನದ ಡಾ.ರೂಪೇಶ್‌ಚೌಧರಿ, ಆಕಾಶ್‌ಶರ್ಮ ಮಾತನಾಡಿ, ಚಳ್ಳಕೆರೆ ನಗರದಲ್ಲಿ ನಾವು ಈ ಶಿಬಿರವನ್ನು ಹಮ್ಮಿಕೊಂಡಿದ್ದೇವೆ. ಆಕ್ಯುಪ್ರೆಷರ್ ಮತ್ತು ವೈಬ್ರೇಷನ್ ಥೆರಪಿಗೆ ಸಾಮಾನ್ಯವಾಗಿ ಸಾರ್ವಜನಿಕರು ಎರಡ್ಮೂರು ಸಾವಿರ ಹಣ ಖರ್ಚು ಮಾಡಬೇಕಾಗುತ್ತದೆ. ಆದರೆ, ನಾವು ಕೇವಲ 150 ಪ್ರವೇಶ ಶುಲ್ಕವನ್ನು ಮಾತ್ರ ಪಡೆದು ಜನರ ಆರೋಗ್ಯ ತಪಾಸಣೆ ನಡೆಸುತ್ತೇವೆಂದರು.

ಕಾರ್ಯಕ್ರಮದ ಅದ್ಯಕ್ಷತೆಯನ್ನು ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್ ವಹಿಸಿದ್ದರು. ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಮೀರಾರಮೇಶ್, ಕಾರ್ಯದರ್ಶಿ ಸುನಿತಾಗೌಡರ್, ಕಾರ್ಯದರ್ಶಿ ತಿಪ್ಪೇಸ್ವಾಮಿ, ಡಾ.ವಿಷ್ಣು ಮುಂತಾದವರುಭಾಗವಹಿಸಿದ್ದರು.

## ಯೋಚಿಸಿ ಅಮೂಲ್ಯ ಮತ ಹಾಕಿ

» ಚಿತ್ರದುರ್ಗ



ದೇಶದ ಅಭಿವೃದ್ಧಿಗಾಗಿ ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡುವ ಜವಾಬ್ದಾರಿ ದೇಶದ ಪ್ರತಿಯೊಬ್ಬ ವ್ಯಕ್ತಿ ಮೇಲಿದೆ. ಇದಕ್ಕಾಗಿ ಮತದಾನ ಮಾಡುವುದು ಅತ್ಯಗತ್ಯವಾಗಿದೆ. ಯಾವುದೇ ಮತದಾರ ಮತದಾನದಿಂದ ಹೊರಗುಳಿಯಬಾರದು.ಒಳ್ಳೆಯಜನಪ್ರತಿನಿಧಿಗಳನ್ನು ಆಯ್ಕೆ ಮಾಡಬೇಕು. ನಾವು ಯೋಚಿಸಿ ನಮ್ಮ ಅಮೂಲ್ಯ ಮತ ಚಲಾಯಿಸುವುದು ಅತೀ ಆವಶ್ಯಕ. ಯೋಗ್ಯ, ಸಮರ್ಥ ಜನನಾಯಕನ ಆಯ್ಕೆ ನಮ್ಮ ಕರ್ತವ್ಯವಾಗಿದೆ ಎಂದು ಶ್ರೀ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನ, ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ತಿಳಿಸಿದ್ದಾರೆ.

ಈ ಬಗ್ಗೆ ಹೇಳಿಕೆ ನೀಡಿರುವ ಶ್ರೀಗಳು, ಜ್ಯಾತ್ಯಾತೀತ ಭಾರತರಾಷ್ಟ್ರದಲ್ಲಿಬೆರಳಿಣಿಕೆಯಧರ್ಮಗಳಲ್ಲಿ3,000 ಜಾತಿಗಳು ಮತ್ತು 25,000 ಉಪ-ಜಾತಿಗಳಿವೆ. ಭಾರತದ ಪ್ರಸ್ತುತ ಜನಸಂಖ್ಯೆ ಸರಿಸುಮಾರು 144 ಕೋಟಿ. ಈ ಜನಸಂಖ್ಯೆಯಲ್ಲಿ ಪ್ರಜಾಸತ್ತಾತ್ಮಕ ಮತ ಹಾಕುವ ಅರ್ಹರು ಸರಿಸುಮಾರು 96.8 ಕೋಟಿ ಮತದಾರರು. ಡಾ. ಬಿ.ಆರ್.ಅಂಬೇಡ್ಕರ್ ಅವರು ಚುನಾವಣೆ ಮೂಲಕ ದೇಶದಲ್ಲಿ ಪ್ರಜಾಪ್ರಭುತ್ವ ಗಟ್ಟಿಯಾಗಿ ನೆಲೆಗೊಳ್ಳಬೇಕು ಎಂದು ಕನಸು ಕಂಡಿದ್ದರು. ಬೃಹತ್ತಾದ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ನಮ್ಮನ್ನಾಳಲು 543 ಲೋಕಾಸಭಾ ಸದಸ್ಯರನ್ನು ಆಯ್ಕೆ ಮಾಡುವ ಜವಾಬ್ದಾರಿ ಪ್ರಜಾಸತ್ತಾತ್ಮಕ ರಾಷ್ಟ್ರದ ಪ್ರಭುಗಳಾದ ಪ್ರಜೆಗಳ ಮೇಲಿದೆ ಎಂದಿದ್ದಾರೆ.

ಲೋಕಸಭಾ ಹೇಗಿರಬೇಕೆಂದರೆ ಬಸವಣ್ಣನವರ ಅನುಭವ ಮಂಟಪದಂತೆ ಇರಬೇಕು. ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಸಂವಿಂಧಾನದ ಮೂಲ ಆಶಯ. ಈ ಆಶಯ ಈಡೇರಲು ಒಂದೊಂದು ಜನಾಂಗದ/ ಸಮುದಾಯದ ಪ್ರತಿನಿಧಿ ಸಂಸತ್ ಭವನದಲ್ಲಿದ್ದರೆ ಮಾತ್ರ ಹಿಂದುಳಿದ ಅತಿಹಿಂದುಳಿದ ಸಮೂದಾಯಗಳಿಗೆ ಧ್ವನಿ ಬರಲು ಸಾಧ್ಯ. ಕೇವಲ ಬಂಡವಾಳ ಶಾಹಿಗಳು ಸಂಸತ್ ಪ್ರವೇಶ ಮಾಡುವಂತಾದರೆ ಭವಿಷ್ಯದಲ್ಲಿ ಪ್ರಜಾಪ್ರಭುತ್ವ ತೆರೆಮರೆಗೆ ಸರೆದು ನಮ್ಮ ಹಕ್ಕುಗಳು ಕಳೆದುಕೊಳ್ಳುತ್ತಾ ಗುಲಾಮಗಿರಿ ವ್ಯವಸ್ಥೆಗೆ ಜಾರುತ್ತೇವೆ. ಜಾಣರಾಗಿ ಜಾಗೃತರಾಗಬೇಕಿದೆ.


ನ್ಯೂಜಿಲೆಂಡ್ ಸಂಸತ್ತಿನಲ್ಲಿ ಅತ್ಯಂತ ಕಿರಿಯ ಸಂಸದೆಯಾದ ಆ ಭಾಗದ ಬುಡಕಟ್ಟು ಸಮುದಾಯಾದ ಹನಾ ರಾವಿತಿ ಅವರು ತಮ್ಮ ಸಾಂಸ್ಕೃತಿಕ ಭಾಷೆ ಹಾಗೂ ಹಾಡುಗಾರಿಕೆ ಮೂಲಕ ಈಡಿ ಜಗತ್ತನ್ನೆ ತನ್ನ ಸಮುದಾಯದ ಬಗ್ಗೆ ಚರ್ಚಿಸುವಂತೆ ಹಾಗೂ ವಿಮರ್ಶೆಗೆ ಒಳಪಡಿಸುವಂತೆ ತನಗೆ ಸಿಕ್ಕ ಅವಕಾಶವನ್ನು ಬಳಸಿಕೊಂಡರು. ಈ ರೀತಿಯಾಗಿ ಭಾರತದ ದೇಶದಲ್ಲಿ ಧ್ವನಿ ಮಾಡುವ ತನ್ನ ಸಮುದಾಯವನ್ನು ಜಗತ್ತಿಗೆ ಪರಿಚಯಿಸುವ ಹಾಗೂ ನೈಜ ಜ್ಯಾತ್ಯತೀತ ರಾಷ್ಟ್ರ ನಿರ್ಮಾಣಕ್ಕೆ ಯೊಗ್ಯ ಅರ್ಹತೆಯುಳ್ಳ ಸರ್ವಸಮೂದಾಯದ ವ್ಯಕ್ತಿಗಳಿಗೆ ಅವಕಾಶ ನೀಡಬೇಕಿದೆ.

## ಪ್ರಮುಖ ಸುದ್ದಿ

# ತಾಲೂಕು ಸ್ವೀಪ್ ಸಮಿತಿಯಿಂದ ಆಕರ್ಷಕ ಪಂಜಿನ ಮೆರವಣಿಗೆ

» ಚಳ್ಳಕೆರೆ

ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಏ. 26ರಂದು ಮತದಾನ ನಡೆಲಿದ್ದು, ಬಹಿರಂಗ ಪ್ರಚಾರಕ್ಕೆ ಏ.24 ಅಂತಿಮ ದಿನವಾಗಿದ್ದರೂ ಸಹ ಸ್ವೀಪ್ ಸಮಿತಿಯಿಂದ ಕೊನೆ ಕ್ಷಣದ ಮತದಾನ ಜಾಗೃತಿ ಕಾರ್ಯಕ್ರಮವನ್ನು ನಗರದ ತಾಲ್ಲೂಕು ಕಚೇರಿ ಮುಂಭಾಗದ ಅಂಬೇಡ್ಕರ್ ವೃತ್ತದಲ್ಲಿ ಏರ್ಪಡಿಸಲಾಗಿತ್ತು.





ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ಸ್ವೀಪ್ ಸಮಿತಿಯಿಂದ ಆಯೋಜನೆಗೊಂಡ ಪಂಜಿನ ಮೆರವಣಿಗೆಗೆ ಚಾಲನೆ ನೀಡಿದರು. ಮತದಾನ ಪ್ರತಿಯೊಬ್ಬನ ಹಕ್ಕು ಹಾಗೂ ಕರ್ತವ್ಯವಾಗಿದ್ದು, ಮತದಾನ ಪ್ರಕ್ರಿಯೆಯಲ್ಲಿ ಎಲ್ಲಾ ಮತದಾರರು ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಮತದಾನ ಮಾಡುವುದು ತಮ್ಮ ಪವಿತ್ರವಾದ ಜವಾಬ್ದಾರಿ ಎಂಬುವುದನ್ನು ಎಲ್ಲರೂ ಅರಿಯಬೇಕು. ಚುನಾವಣಾ ಆಯೋಗದ ನಿರ್ದೇಶನದಂತೆ ಸ್ವೀಪ್ ಸಮಿತಿ ಮತದಾರ ಜಾಗೃತಿ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸುತ್ತಾ ಬಂದಿದೆ. ಹೆಚ್ಚು ಪ್ರಮಾಣದಲ್ಲಿ ಮತದಾನವಾದರೆ ಈ ಕಾರ್ಯದ ಉದ್ದೇಶ ಸಫಲವಾಗುತ್ತದೆ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷ, ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್, ಸ್ವೀಪ್ ಸಮಿತಿ ಕಾರ್ಯದರ್ಶಿ, ಪೌರಾಯುಕ್ತ ಜೀವನ್‌ಕಟ್ಟಿಮನಿ, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಸುನೀಲ್, ಗೀತಾಕುಮಾರಿ, ತಿಪ್ಪೇಸ್ವಾಮಿ, ವೀರಭದ್ರಿ, ಚೇತನ್, ಎಸ್.ಎಲ್. ಮಂಜಣ್ಣ, ಚುನಾವಣಾಧಿಕಾರಿ ಇಲಾಖೆ ಶ್ರೀಧರ, ಓಬಳೇಶ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದಾಖಲೆ ಇಲ್ಲದ ರೂ.23 ಲಕ್ಷ ನಗದು ವಶಕ್ಕೆ

» ಬಳ್ಳಾರಿ

ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಮಲೇಶ್ ಎನ್ನುವ ವ್ಯಕ್ತಿಯ ಮನೆಯಲ್ಲಿ ಸೂಕ್ತ ದಾಖಲೆಯಿಲ್ಲದ ರೂ.23 ಲಕ್ಷದ ನಗದನ್ನು ಬುಧವಾರ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದ್ದು, ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಖಚಿತ ಮಾಹಿತಿ ಮೇರೆಗೆ ಎಫ್‌ಎಸ್‌ಟಿ ಮತ್ತು ಎಸ್‌ಎಸ್‌ಟಿ ತಂಡಗಳು ದಾಳಿ ನಡೆಸಿ, ಜಪ್ತಿ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ. ಅದೇರೀತಿಯಾಗಿ ವಿವಿಧೆಡೆ ಅಬಕಾರಿ ಇಲಾಖೆ ಪೊಲೀಸ್ ಅಧಿಕಾರಿಗಳಿಂದ 30.06 ಲೀ. (ಅಂದಾಜು ರೂ.15,148 ಮೌಲ್ಯದ) ಮದ್ಯ ವಶಪಡಿಸಿಕೊಳ್ಳಲಾಗಿದೆ ಮತ್ತು 0.08 ಕೆ.ಜಿ (ಅಂದಾಜು ರೂ.1,400 ಮೌಲ್ಯದ) ಗಾಂಜಾ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

### ಪ್ರಜಾಪ್ರಭುತ್ವ ಧ್ವನಿ ಮತದಾನದ ಮೂಲಕ ಪ್ರತಿಧ್ವನಿಸುತ್ತದೆ: ಡಾ.ಶರತ್

» ಶಿವಮೊಗ್ಗ

ಪ್ರಜಾಪ್ರಭುತ್ವದ ಧ್ವನಿ ಮತದಾನದ ಮೂಲಕ ದೇಶದಲ್ಲಿ ಪ್ರತಿಧ್ವನಿಸುತ್ತದೆ. ಪ್ರತಿಯೊಬ್ಬರು ಮತದಾನ ಮಾಡಿ ಎಂದು ಕುವೆಂಪು ವಿಶ್ವವಿದ್ಯಾಲಯ ಕುಲಪತಿಗಳಾದ ಡಾ.ಶರತ್ ಅನಂತಮೂರ್ತಿ ತಿಳಿಸಿದರು. ಶಿವಮೊಗ್ಗ ಜಿಲ್ಲಾ ಜಾಗೃತ ಮತದಾರರ ವೇದಿಕೆ, ಸ್ವೀಪ್ ಸಮಿತಿ, ಕುವೆಂಪು ಶತಮಾನೋತ್ಸವ ಶಿಕ್ಷಣ ಮಹಾವಿದ್ಯಾಲಯ, ವತಿಯಿಂದ ಮತದಾನದ ಜಾಗೃತಿ ಕುರಿತು ಕವಿಗೋಷ್ಠಿ ಸಮಾರೋಪ ಕಾರ್ಯಕ್ರಮವನ್ನು ಕಾಲೇಜಿನ ಸಭಾಗಂಣದಲ್ಲಿ ಏ.23ರಂದುನಡೆಸಲಾಯಿತು.ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಪ್ರತಿಯೊಬ್ಬರ ಧ್ವನಿ ಪ್ರತಿಧ್ವನಿಸಬೇಕು ಎಂದರೆ ಪ್ರತಿಯೊಬ್ಬರು ಮತದಾನ ಮಾಡಬೇಕು ನಾವು ಮತದಾನ ಮಾಡದೇ ಹೊದರೇ ತಾಂತ್ರಿಕ ಜಗತ್ತು ಬೆಳೆಯುತ್ತಾ ಮನುಷ್ಯರಿಗೆ ಬೆಲೆ ಇರುವುದಿಲ್ಲ. ಮತದಾನದ ಮೂಲಕ ಸಂಸತ್ತಿನಲ್ಲಿ ನಿಮ್ಮ ಧ್ವನಿ ಕೇಳಿಸುತ್ತದೆ ಒಂದೊಂದು ಮತದಾನವೂ ಅತ್ಯಂತ ಅಮೂಲ್ಯವಾಗಿದೆ ಪ್ರತಿಯೊಬ್ಬರು ಮತದಾನ ಮಾಡಿ ಎಂದು ಕರೆ ನೀಡಿದರು. ಮತದಾರ ಜಾಗೃತಿಯಾಗುವುದು ಅತೀ ಮುಖ್ಯವಾಗಿದೆ. ವಿಭಿನ್ನವಾಗಿವಾಗಿ ಕವಿಗೋಷ್ಠಿಯ ಮೂಲಕ ಯುವ ಮತದಾರರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ವಿಶೇಷವಾಗಿದೆ ಎಂದರು. ತಹಶಿಲ್ದಾರ್ ಗಿರೀಶ್ ಅವರು ಮಾತನಾಡಿ ಭಾರತ ಸಂವಿಧಾನ ಬಂದು ಇಷ್ಟು ವರ್ಷಗಳು ಕಳೆದರು ನಾವು ಇನ್ನೂ ಜಾಗೃತರಾಗಿಲ್ಲ ಭಾರತ ಸಂವಿಧಾನದ ಮೂಲಕ ನಾವು ಎಲ್ಲಾ ಹಕ್ಕುಗಳನ್ನು ಪಡೆದುಕೊಂಡಿದ್ದೇವೆ. ಆದರೆ ಮತದಾನದಲ್ಲಿ ನಾವು ಹಿಂದೆ ಉಳಿದಿದ್ದೇವೆ ಮತದಾನ ನಮ್ಮ ಜವಾಬ್ದಾರಿ ಹಾಗೂ ಕರ್ತವ್ಯ ಎಂದು ಭಾವಿಸಿ ನೀವು ಮತದಾನ ಮಾಡಬೇಕು ಜೊತೆಯಲ್ಲಿ ನಿಮ್ಮ ಸುತ್ತಮುತ್ತಲಿನ ಜನರಿಗೆ ಅರಿವು ಮೂಡಿಸಿ ಮತದಾನ ಮಾಡುವಂತೆ ಪ್ರೇರೇಪಿಸಬೇಕು ಎಂದರು.

### ಮನೆಯಿಂದ ಮತದಾನ ಏಪ್ರಿಲ್ 25 ರಿಂದ 27 ರ ವರೆಗೆ 2262 ಮತದಾರರು ನೊಂದಣಿ

# ದಾವಣಗೆರೆ ಲೋಕಸಭೆ 1709244 ಮತದಾರರು

» ದಾವಣಗೆರೆ




ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ಮನೆಯಲ್ಲಿಯೇ ಮತದಾನ ಪ್ರಕ್ರಿಯೆ ಏಪ್ರಿಲ್ 25 ರಿಂದ 27 ರ ವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಚುನಾವಣಾ ಅಭ್ಯರ್ಥಿಗಳು ಹಾಗೂ ಅಭ್ಯರ್ಥಿಗಳ ಏಜೆಂಟರೊಂದಿಗೆ ನಡೆಸಲಾದ ಸಭೆಯಲ್ಲಿ ಮಾತನಾಡಿದರು. 85 ವರ್ಷ ಮೇಲ್ಪಟ್ಟ ಮತ್ತು ವಿಶೇಷಚೇತನ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡಲು ಆಯೋಗ ಅವಕಾಶ ಕಲ್ಪಿಸಿದೆ. ಈಗಾಗಲೇ ಮತದಾರರ ಮನೆಬಾಗಿಲಿಗೆ ಬಿ.ಎಲ್.ಓ. ತೆರಳಿ ಇಆರ್‌ಓ ನೆಟ್‌ನಲ್ಲಿ ನೊಂದಾಯಿಸಿ ನಮೂನೆ-12ಡಿ ರಡಿ ಘೋಷಣಾ ಪತ್ರ ಪಡೆದು ಮಾರ್ಕ್ ಮಾಡಲಾಗಿದೆ.

ಮನೆಯಲ್ಲಿ ಮತದಾನ ಮಾಡುವವರು; ಕ್ಷೇತ್ರದಲ್ಲಿ ವಿಶೇಷಚೇತನರು 804, ಹಿರಿಯ ನಾಗರಿಕರಾದ 85 ವರ್ಷ ಮೇಲ್ಪಟ್ಟವರು 1458 ಮತದಾರರು ನೊಂದಾಯಿಸಿದ್ದು ಏಪ್ರಿಲ್ 25 ರ ಬೆಳಗ್ಗೆ 9 ಗಂಟೆಯಿಂದ ಮನೆಯಲ್ಲಿಯೇ ಮತದಾನ ಆರಂಭವಾಗಲಿದೆ. ಇದು ಏ.26 ಮತ್ತು ಕೊನೆಯ ಭೇಟಿಯಾಗಿ ಏ.27 ರವರೆಗೆ ನಡೆಯಲಿದೆ. ಮನೆಯಲ್ಲಿಯೇ ಮತದಾನ ಮಾಡಲು ಪ್ರತಿ ತಂಡದಲ್ಲಿ ಸೆಕ್ಟರ್ ಅಧಿಕಾರಿ, ಮತಗಟ್ಟೆ ಅಧಿಕಾರಿ, ಮತದಾನ ಅಧಿಕಾರಿ, ಮೈಕ್ರೋ ಅಬ್ಸರ್‌ವರ್, ವೀಡಿಯೋಗ್ರಾಫರ್, ಪೊಲೀಸ್ ಸಿಬ್ಬಂದಿ ಇದ್ದು ಒಟ್ಟು 82 ಮಾರ್ಗಗಳನ್ನು ರಚಿಸಲಾಗಿದೆ ಎಂದರು.

ಅಗತ್ಯ ಸೇವಾ ಮತದಾರರು; ಚುನಾವಣಾ ಸಂದರ್ಭದಲ್ಲಿ ಅಗತ್ಯ ಸೇವಾ ಇಲಾಖೆಯಲ್ಲಿ ಕೆಲಸ ಮಾಡುವವರು ಮತದಾನ ಮಾಡಲು ಸಾಧ್ಯವಾಗುವುದಿಲ್ಲ ಎಂದು 16 ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳಿಗೆ ಮತದಾನಕ್ಕೂ ಮುಂಚಿತವಾಗಿ ಸೌಲಭ್ಯ ಕೇಂದ್ರದಲ್ಲಿ ಬ್ಯಾಲೆಟ್ ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. 915 ಮತದಾರರು ನೊಂದಾಯಿಸಿದ್ದು ಈ ಸಿಬ್ಬಂದಿಗಳಿಗೆ ಮೇ 1 ರಿಂದ 3 ರ ವರೆಗೆ ಸ್ಮಾರ್ಟ್ ಸಿಟಿ ಕಚೇರಿಯಲ್ಲಿ ಅಂಚೆ ಮತದಾನ ಮಾಡಲು ಸೌಲಭ್ಯ ಕೇಂದ್ರ ಸ್ಥಾಪನೆ ಮಾಡಲಾಗುತ್ತಿದೆ ಎಂದರು. ಪುರುಷರಿಗಿಂತ ಮಹಿಳಾ ಮತದಾರರು ಅಧಿಕ; ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಅಂತಿಮವಾಗಿ 17,09,244 ಮತದಾರರಿದ್ದಾರೆ. ಇದರಲ್ಲಿ ಪುರುಷರು 8,51,990, ಮಹಿಳೆಯರು 8,57,117 ಹಾಗೂ ತೃತೀಯ ಲಿಂಗ 137 ಮತದಾರರಿದ್ದಾರೆ. ದಾವಣಗೆರೆ ಕ್ಷೇತ್ರದಲ್ಲಿ ಪುರುಷರಿಗಿಂತ 5127 ಮಹಿಳಾ ಮತದಾರಿದ್ದಾರೆ.

ಕ್ಷೇತ್ರವಾರು ಮತದಾರರ ವಿವರ; ಜಗಳೂರು 100046 ಪುರುಷ, 98759 ಮಹಿಳಾ, 10 ಇತರೆ ಸೇರಿ 198815, ಹರಪನಹಳ್ಳಿ 112969 ಪುರುಷ, 110985 ಮಹಿಳಾ, 19 ಇತರೆ ಸೇರಿ 223973, ಹರಿಹರ 105510 ಪುರುಷ, 106870 ಮಹಿಳೆ, 17 ಇತರೆ ಒಟ್ಟು 212397, ದಾವಣಗೆರೆ ಉತ್ತರ 124485 ಪುರುಷ, 128635 ಮಹಿಳೆ, 36 ಇತರೆ ಸೇರಿ 253156, ದಕ್ಷಿಣ 109184 ಪುರುಷ, 111774 ಮಹಿಳೆ, 39 ಇತರೆ ಸೇರಿ 220997, ಮಾಯಕೊಂಡ 97759 ಪುರುಷ, 97326 ಮಹಿಳೆ, 4 ಇತರೆ ಸೇರಿ 195089, ಚನ್ನಗಿರಿ 101653 ಪುರುಷ, 102208 ಮಹಿಳೆ, 9 ಇತರೆ ಸೇರಿ 203870 ಹಾಗೂ ಹೊನ್ನಾಳಿ ಕ್ಷೇತ್ರದಲ್ಲಿ 100384 ಪುರುಷ, 100560 ಮಹಿಳೆ ಹಾಗೂ 3 ಇತರೆ ಸೇರಿ 200947 ಮತದಾರರಿದ್ದಾರೆ.

ಮತದಾರರ ವಿವರವನ್ನು ಅಭ್ಯರ್ಥಿಗಳಿಗೆ ನೀಡುವ ಮೂಲಕ ಮತಗಟ್ಟೆ ಮಟ್ಟದ ಏಜೆಂಟರ ಪಟ್ಟಿಯನ್ನು ನೀಡಲು ಅಭ್ಯರ್ಥಿಗಳಿಗೆ ತಿಳಿಸಿ 30 ಜನ ಅಭ್ಯರ್ಥಿಗಳಿರುವುದರಿಂದ ಮತದಾನ ದಿನ ಎರಡು ಬ್ಯಾಲೆಟ್ ಯುನಿಟ್ ಬಳಕೆ ಮಾಡಲಾಗುತ್ತಿದೆ. ಹೆಚ್ಚುವರಿಯಾಗಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಿಂದ ಬ್ಯಾಲೆಟ್ ಯುನಿಟ್‌ಗಳು ಬಂದಿದ್ದು ಒಂದೆರೆಡು ದಿನಗಳಲ್ಲಿ ಮೊದಲ ಹಂತದ ಪರಿಶೀಲನೆ ನಡೆಸಿ ರ್‍ಯಾಂಡಮೈಜೇಷನ್ ಮಾಡಿ ಆಯಾ ಕ್ಷೇತ್ರಗಳ ಇವಿಎಂ ಸ್ಟ್ರಾಂಗ್ ರೂಂನಲ್ಲಿ ದಾಸ್ತಾನು ಮಾಡಲಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಸಹಾಯಕ ಚುನಾವಣಾಧಿಕಾರಿಗಳಾದ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಎ.ಆರ್.ಓ.ಗಳಾದ ದುರ್ಗಶ್ರೀ. ಎನ್, ರೇಣುಕಾ, ಭಾವನಾ ಹಾಗೂ ಕಣದಲ್ಲಿನ ಅಭ್ಯರ್ಥಿಗಳು, ಏಜೆಂಟರು ಉಪಸ್ಥಿತರಿದ್ದರು.

# ಹುಣಸೆ ಚಿಗುರು ಸಾಂಬಾರ್ ರುಚಿಯೇ ರುಚಿ ಎಲ್ಲರ ಬಾಯಲ್ಲೂ ನೀರೂರಿಸುತ್ತಿದೆ

» ಮಹದೇವಪುರ ಶಿವಮೂರ್ತಿ






ಪರಶುರಾಂಪುರ: ಬಯಲು ಸೀಮೆ ಜನಕ್ಕೆ ಬೇಸಿಗೆ ಬಂದರೆ ಸಾಕು ಗೃಹಿಣಿಯರು ತರಕಾರಿಗೆ ಬ್ರೇಕ್ ಹಾಕಿ ಹುಣಸೆ ಚಿಗುರಿನ ಸಾಂಬಾರು ತಯಾರು ಜತೆಗೆ ಆ ಸಾಂಬರಿನಲ್ಲಿ ಊಟ ಎಂದರೇ ಚಿಗುರು ಪ್ರಿಯರಿಗೆ ನೀರೂರಿಸುವಂತೆ ಮಾಡಿದೆ.

ಬಯಲು ಸೀಮೆಯ ಜಿಲ್ಲೆಯಲ್ಲಿನ ಜನ ಬೇಸಿಗೆಯಲ್ಲಿ ಹುಣಸೆ ಚಿಗುರಿನಿಂದ ವಿಶೇಷ ಅಡುಗೆ ತಯಾರಿಸುವುದನ್ನು ಕರಗತ ಮಾಡಿಕೊಂಡಿದ್ದಾರೆ. ಚಿತ್ರದುರ್ಗ, ತುಮಕೂರು ಸೇರಿದಂತೆ ಇನ್ನಿತರ ಭಾಗದಲ್ಲಿ ಹುಣಸೆ ಜತೆ , ಹಣ್ಣು,ಹೂ, ಕಾಯಿ ಹಾಗೂ ಚಿಗುರಿಗೂ ಅಷ್ಟೇ ಪ್ರಸಿದ್ಧಿ ಪಡೆದಿದೆ.

ಉಷ್ಣವಲಯದ ಬೆಳೆ ಯಾಗಿರುವ ಹುಣಸೆ ಬಂಜರು ಮತ್ತು ಅರೆ ನೀರಾವರಿ ಪ್ರದೇಶದಲ್ಲಿ ಬೆಳೆಯುವ ಅಮೂಲ್ಯ ವೃಕ್ಷ. ಹಣ್ಣಿನ ತಿರುಳು 'ಸಿ' ಜೀವಸತ್ವವನ್ನು ಹೊಂದಿದ್ದರೆ, ಮುಂಗಾರಿಗೂ ಮೊದಲು ಅರಳುವ ಚಿಗುರು ಪೋಷಕಾಂಶಗಳ ಆಗರ.

ಹುಣಸೆ ಮರಗಳ ಚಿಗುರು ಮತ್ತು ಹೂಗಳ ವಿವಿಧ ಬಗೆಯ ಸಾಂಬಾರು ತಯಾರಿಸುತ್ತಾರೆ. ಚಿಗುರಿಗೆ ರೋಗ ನಿರೋಧಕ ಶಕ್ತಿ ಹೆಚ್ಚಿಸುವ ಗುಣ ಇದ್ದು, ಹಲವರು ಮುಂಜಾನೆಯೇ ಹೂ, ಮೊಗ್ಗುಗಳನ್ನು ಸಂಗ್ರಹಿಸುತ್ತಿದ್ದಾರೆ.

ಚಿಗುರು ಒಣಗಿಸಿ ಚಟ್ನಿ ಪುಡಿ ಮಾಡಿ ಪಿತ್ತ ನಿವಾರಣೆಗೆ ಬಳಸುತ್ತಾರೆ. ಹುಣಸೆ ತೊಕ್ಕನ್ನು 1 ವರ್ಷ ಕೆಡದಂತೆ ಸಂಗ್ರಹಿಸಬಹುದು. ಔಷಧ ತಯಾರಿಯಲ್ಲಿ ಹಣ್ಣು, ಎಲೆ ಮತ್ತು ತೊಗಟೆ ಬಳಕೆ ಆಗುತ್ತದೆ. ಎಲೆ, ಹೂ, ಹಣ್ಣು ಮತ್ತು ಚಿಗುರು ಆಹಾರ ಪದಾರ್ಥಗಳಿಗೆ, ಬೀಜವನ್ನು ಅಂಟು ಮತ್ತು ಎಣ್ಣೆಗಾಗಿ ಬಳಕೆ ಮಾಡುತ್ತಾರೆ ಎಂದು ನಾಗರಾಜಪ್ಪ ಹೇಳಿದರು.

ಹೂ, ಎಲೆ ಮತ್ತು ಹಣ್ಣಿನಲ್ಲಿ ಟಾರ್ಟಾರಿಕ್ ಆಮ್ಲ ಇರುತ್ತದೆ. ಸಕ್ಕರೆ, ಬಿ ಜೀವಸತ್ವ ಮತ್ತು ಕ್ಯಾಲ್ಸಿಯಂನಿಂದ ಸಮೃದ್ಧವಾಗಿದೆ. ಇದನ್ನು ಬಲ್ಲವರು ಕೋವಿಡ್ ಕಾಲಘಟ್ಟದಲ್ಲಿ ಆಹಾರದ ಭಾಗವಾಗಿ ಸೇವಿಸುತ್ತಾರೆ. ಇತರ ಸೊಪ್ಪುಗಳ ಜೊತೆ ಬೆರಸಿ ಇಲ್ಲವೇ ಚಿಗುರಿನಿಂದ ಮಾಡುವ ರಸಂ ಅನ್ನು ಇಷ್ಟಪಟ್ಟು ಸವಿಯುತ್ತಾರೆ. ಕೆಲವರು ಚಿಗುರು ಮಾರಾಟ ಮಾಡಿ ತುಸು ಆದಾಯ ಗಳಿಸುವುದೂ ಇದೆ.

ಬಿಳಿ ಚಿಗುರು ಕಡಿಮೆ ಒಗರಿನಿಂದ ಕೂಡಿದ್ದು, ಉತ್ತಮ ರುಚಿ ಹೊಂದಿರುತ್ತದೆ. ರಾಗಿ ಮುದ್ದೆ ಮತ್ತು ಗಟ್ಟಿಯಾದ ಚಿಗುರು ಸಾರು ನಾಲಿಗೆಯ ರುಚಿ ಹೆಚ್ಚಿಸುತ್ತದೆ. ರಸವನ್ನು ಸೂಪಿನಂತೆ ಬಳಸಿದರೆ ಕಫ, ಪಿತ್ತ ನಿವಾರಿಸಬಹುದು. ಇದರಲ್ಲಿ ಹೆಚ್ಚಿನ ಸಿ ವಿಟಮಿನ್ ಇದರಲ್ಲಿ ಸಿಗುತ್ತದೆ.ಮಾನ್ಸೂನ್‌ಗೂ ಮೊದಲ ಚಿಗುರು ಸೇವಿಸುವುದು ಉತ್ತಮ ಸಂದರ್ಭ ಎನ್ನುತ್ತಾರೆ ಗೃಹಿಣಿ ರಾಜಮ್ಮ.

ಚಿಗುರಿನ ಹುಳಿ ತಿಂದವರಿಗೆ ಮಾತ್ರ ಗೊತ್ತು. ಕೆಲವರು ಹುಣಸೆ ಹಣ್ಣಿನ ಬದಲಿಗೆ ಹುಣಸೆ ಚಿಗುರು ಹಾಕಿ ಸಾಂಬರ್ ಮಾಡುತ್ತಾರೆ. ಚಿಗುರಿನ ಸಾಂಬರ್ ರುಚಿಯೇ ರುಚಿ' ಎಂದು ನೀರೂರಿಸುತ್ತಾ ಎಂದು ಹಿರಿಯ ಕಣುಮಪ್ಪ ಹೇಳುವರು.

### ಬಾನಂಗಳಲ್ಲಿ ಮತದಾನ ಅಭಿಯಾನ, ಹೀಲಿಯಂ ಬಲೂನ್ ಹಾರಿಸಿದ ಜಿಲ್ಲಾಧಿಕಾರಿ ಡಾ; ವೆಂಕಟೇಶ್

» ದಾವಣಗೆರೆ




ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸುವ ಮೂಲಕ ಗುಣಾತ್ಮಕ ಪ್ರತಿನಿಧಿ ಆಯ್ಕೆಯಾಗಬೇಕೆಂದು ಸ್ವೀಪ್ ಸಮಿತಿ ನಿರಂತರ ಪ್ರಯತ್ನ ಮಾಡುತ್ತಿದ್ದು ಬಾನಂಗಳಲ್ಲಿ ಮತದಾನ ಜಾಗೃತಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಬಲೂನ್ ಹಾರಿಬಿಡುವ ಮೂಲಕ ಚಾಲನೆ ನೀಡಿದರು.

ಅವರು ಬುಧವಾರ ಜಿಲ್ಲಾ ಆಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಾಲಿಕೆ ಕಟ್ಟಡದ ಮೇಲೆ ಮತದಾರರ ಜಾಗೃತಿಗಾಗಿ 12 ಅಡಿ ಸುತ್ತಳತೆಯುಳ್ಳ ಹೀಲಿಯಂ ತುಂಬಿದ ಬಲೂನ್ ಹಾರಿಬಿಡಲಾಯಿತು.

ಕಡ್ಡಾಯವಾಗಿ ಮತದಾನ ಮಾಡಿ, 2024 ರ ಮೇ 07 ರಂದು ಮಂಗಳವಾರ ಎಂಬ ಘೋಷದಡಿ ಬಲೂನ್ ಹಾರಿ ಬಿಡಲಾಯಿತು. ಈ ಬಲೂನ್ 100 ಅಡಿ ಎತ್ತರದಲ್ಲಿ ಹಾರಾಡುವ ಮೂಲಕ ದಾವಣಗೆರೆ ನಾಗರಿಕರು ಸೇರಿದಂತೆ ಸಾರ್ವಜನಿಕರಿಗೆ ಪ್ರದರ್ಶನವಾಗುವಂತೆ ಅನಾವರಣ ಮಾಡುವ ಮೂಲಕ ಚುನಾವಣಾ ಜಾಗೃತಿ ಮೂಡಿಸಲಾಗುತ್ತಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಆರೋಗ್ಯ ಇಲಾಖೆ ಕಾರ್ಯಕ್ರಮ ಅಧಿಕಾರಿಗಳಾದ ಡಾ; ಗಂಗಾಧರ್, ಡಾ; ರೇಣುಕಾರಾಧ್ಯ, ಡಾ; ಮಂಜುನಾಥ ಪಾಟೀಲ್, ಸುರೇಶ್ ಬಾರ್ಕಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಗುಡುಗು, ಸಿಡಿಲು ಬಡಿತ: ಸಾರ್ವಜನಿಕರಿಗೆ ಪ್ರಮುಖ ಸಲಹೆ

» ಚಿತ್ರದುರ್ಗ



ಗುಡುಗು, ಸಿಡಿಲು ಬಡಿತ ಪ್ರತಿಕೂಲ ಪರಿಣಾಮಗಳ ಸಂದರ್ಭದಲ್ಲಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಸುತ್ತೋಲೆ ಹೊರಡಿಸಿ ತಿಳಿಸಿದ ನಿಯಮಗಳನ್ನು ಸಾರ್ವಜನಿಕರು ಚಾಚು ತಪ್ಪದೆ ಪಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ.

ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು, ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆಯಲ್ಲಿ ಸಂಭವಿಸುವ ಸಾಧ್ಯತೆಹೆಚ್ಚಾಗಿರುತ್ತದೆ.ಇಂತಹಸಂದರ್ಭದಲ್ಲಿ ಸಾರ್ವಜನಿಕರು ಸಲಹೆಗಳನ್ನು ಪಾಲನೆ ಮಾಡಬೇಕು ಎಂದು ತಿಳಿಸಿದ್ದಾರೆ.

ಗುಡುಗು ಮತ್ತು ಸಿಡಿಲು ಸಂದಭದಲ್ಲಿ ಸಾರ್ವಜನಿಕರು ಪಾಲಿಸಬೇಕಾದ ಸಲಹೆ ಸೂಚನೆಗಳು: ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿಹವಾಮಾನಮುನ್ಸೂಚನೆ ಹಾಗೂ ಮುನ್ನೆಚ್ಚರಿಕೆಗಳನ್ನು ಕಾಮನ್ ಅಲರ್ಟಿಂಗ್ ಪ್ರೋಟೋಕಾಲ್ (ಸಿ.ಎ.ಪಿ) ಮುಖಾಂತರ ಬರುವ ಮೆಸೇಜ್‌ಗಳನ್ನು ಮೊಬೈಲ್‌ನಲ್ಲಿ ಗಮನಿಸಬೇಕು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು ಹಾಗೂ ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು.

ಗುಡುಗು, ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಲ್ಲಿ ಆಶ್ರಯ ಪಡೆಯಬೇಕು. ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿ ಆಶ್ರಯ ಪಡೆಯಬೇಕು.

ನೀರಿನ ಮೂಲಗಳಾದ ಕೆರೆ ಮತ್ತು ನದಿಗಳಿಂದ ದೂರವಿರಬೇಕು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರಬೇಕು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯಬೇಕು. ಗುಡುಗು ಸಿಡಿಲಿನ ಸಮಯದಲ್ಲಿ ಗುಂಪಿನಲ್ಲಿದ್ದರೆ, ಅಪಾಯವನ್ನು ಕಡಿಮೆ ಮಾಡಲುಸಾಕಷ್ಟುಅಂತರಕಾಯ್ದುಕೊಳ್ಳಬೇಕು. ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ, ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳಬೇಕು.

ವಿದ್ಯುತ್ ಅಥವಾ ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಇವು ಮಿಂಚನ್ನು ಆಕರ್ಷಿಸುತ್ತವೆ. ಅರಣ್ಯ ಪುದೇಶದಲ್ಲಿದ್ದರೆ ಸಣ್ಣ ಮತ್ತು ಚಿಕ್ಕ ಮರಗಳ ಕೆಳಗೆ ಆಶ್ರಯ ಪಡೆಯಬೇಕು. ಲೋಹದ ವಸ್ತುಗಳನ್ನು ಬಳಸಬಾರದು ಮತ್ತು ಬೈಕುಗಳು, ವಿದ್ಯುತ್ ಅಥವಾ ದೂರವಾಣಿ ಕಂಬಗಳು, ತಂತಿ ಬೇಲಿ, ಯಂತ್ರಗಳು ಇತ್ಯಾದಿಗಳಿಂದ ದೂರವಿರಬೇಕು. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್‌ಗಳನ್ನು ಬಳಸಬಾರದು. ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು. ಗುಡುಗು ಸಿಡಿಲಿನ ಸಮಯದಲ್ಲಿ ಕಿಟಕಿ, ಬಾಗಿಲುಗಳನ್ನು ಮುಚ್ಚಿ ಬೆಂಕಿ ಮತ್ತು ವಿದ್ಯುತ್ ಶಕ್ತಿ ಸಂಪರ್ಕದಿಂದ ದೂರವಿರಬೇಕು. ಮಕ್ಕಳು, ವಯೋವೃದ್ಧರು ಹಾಗೂಜಾನುವಾರುಗಳನ್ನುಸುರಕ್ಷಿತಸ್ಥಳಗಳಲ್ಲಿ ಇರುವಂತೆ ಗಮನಹರಿಸಬೇಕು. ಹಾರುವ ಮತ್ತು ಅಪಘಾತಕ್ಕೆ ಕಾರಣವಾಗಬಹುದಾದ ಮರದ ಕಟ್ಟಿಗೆ ಅಥವಾ ಯಾವುದೇ ಅವಶೇಷಗಳನ್ನು ತೆಗೆದುಹಾಕಬೇಕು. ಸಿಡಿಲು ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ಹರಿಯುವ ಸಾಧ್ಯತೆ ಇರುವುದರಿಂದ, ಸಿಡಿಲು ಉಂಟಾಗುವ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು. ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು, ಗುಡುಗು ಸಿಡಿಲಿನ ಸಮಯದಲ್ಲಿ, ಮೋಟರ್ ಸೈಕಲ್ ಅಥವಾ ಇನ್ನಿತರೆ ಯಾವುದೇ ತೆರೆದ ವಾಹನಗಳ ಸಂಚಾರವನ್ನು ಮಾಡಬಾರದು. ಆಟದ ಮೈದಾನ, ಉದ್ಯಾನವನಗಳು ಈಜುಕೊಳ ಮತ್ತು ಕಡಲ ತೀರಗಳಿಗೆ ಹೋಗುವುದನ್ನು ತಪ್ಪಿಸಬೇಕು. ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಸಿಡಿಲಿನ ಸಂದರ್ಭದಲ್ಲಿ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರಬೇಕು. ಅರಣ್ಯ, ಪುದೇಶದಿಂದ ಗಿಡ-ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸಬೇಕು ಹಾಗೂ ಮಿಂಚಿನ ಹೊಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿರುತ್ತದೆ. ಮಿಂಚು ಬರುವ ಸಮಯದಲ್ಲಿ ರಬ್ಬರ್ ಸೋಲ್ ಇರುವ ಪಾದರಕ್ಷೆಗಳು ಮತ್ತು ಕಾರಿನ ಚಕ್ರಗಳು ಸುರಕ್ಷಿತವಲ್ಲದ ಕಾರಣ ಅವುಗಳಿಂದ ದೂರವಿರುವುದು. ಬಾಗಿಲುಗಳು, ಕಿಟಕಿಗಳು, ಮಂಟಪಗಳು, ಕಾಂಕ್ರಿಟ್ ನೆಲ, ಬೆಂಕಿಯ ಸ್ಥಳಗಳು, ಸ್ಟವ್‌ಗಳು, ಬಾತ್‌ಟಬ್‌ಗಳು ಅಥವಾ ಇತರೆ ವಿದ್ಯುತ್ ಉಪಕರಣಗಳಿಂದ ದೂರವಿರುವುದು.

ಸಿಡಿಲು,ಮಿಂಚುಬಡಿದಾಗಪಾಲಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನ: ಸಿಡಿಲು, ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 112/108 ಸಹಾಯವಾಣಿಗೆ ಕರೆ ಮಾಡಬೇಕು. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು, ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ದೇಹದಲ್ಲಿ ಯಾವುದೇ ವಿದ್ಯುತ್ ಕಣಗಳು ಸಂಚಾರವಾಗುವುದಿಲ್ಲ. ಆದ್ದರಿಂದ ಸಿಡಿಲಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವ ವ್ಯಕ್ತಿಗೆ ಯಾವುದೇ ಅಪಾಯವಿರುವುದಿಲ್ಲ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಮತ್ತು ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನು ತಿಳಿಯಬಹುದು.

ವ್ಯಕ್ತಿಯಲ್ಲಿ ಉಸಿರಾಟವು ಕಂಡು ಬರದಿದ್ದಲ್ಲಿ ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ cardiac compression ಹಾಗೂ Cardiopulmonary Resuscition ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ಕಣ್ಣಿನ ದೃಷ್ಠಿ, ಕಿವಿ ಕೇಳಿಸುವಿಕೆ ಹಾಗೂ ಮೂಳೆಗಳ ಮುರಿದಿವೆಯೇ ಎಂದು ಪರೀಕ್ಷಿಸಬೇಕು. ಇದರಿಂದ ಪಾರ್ಶ್ವವಾಯು, ಲಕ್ವಾ ಹೊಡೆಯುವುದನ್ನು ಮತ್ತು ಅಧಿಕ ರಕ್ತಸ್ರಾವದಿಂದಉಂಟಾಗುವಅಪಾಯಗಳನ್ನು ತಡೆಗಟ್ಟಬಹುದು. ಸಿಡಿಲು ಬಡಿಯುವ ಸಾಧ್ಯತೆಯು ಮುಂದುವರೆಯುವುದರ ಬಗ್ಗೆ ಈಗಾಗಲೇ ಸಿಡಿಲಿನ ಹೊಡೆತಕ್ಕೆ ಒಳಗಾಗಿರುವ ವ್ಯಕ್ತಿ ಹಾಗೂ ಅವರನ್ನು ರಕ್ಷಿಸುವವರು ಎಚ್ಚರವಹಿಸಬೇಕು. ಸಿಡಿಲಿನ ಹೊಡತಕ್ಕೆ ಒಳಗಾದ ವ್ಯಕ್ತಿಯು ಅಪಾಯಕಾರಿ ಸ್ಥಳದಲ್ಲಿದ್ದರೆ ತಕ್ಷಣವೇ ಅವನನ್ನು, ಅವಳನ್ನು ಸೂಕ್ತ ರಕ್ಷಣಾ ಸ್ಥಳಕ್ಕೆ ಸ್ಥಳಾಂತರಿಸಬೇಕು. ಸಿಡಿಲಿನ ಹೊಡತಕ್ಕೆ ಒಳಗಾದ ವ್ಯಕ್ತಿಯು ವಿವಿಧ ರೀತಿಯ ಸುಟ್ಟುಗಾಯಗಳಿಂದ ಬಳಲಬಹುದು ಹಾಗೂ ಕಾಣದ ಗಾಯಗಳು, ಅಘಾತಕ್ಕೆ ಒಳಗಾಗಿರಬಹುದು. ಆದ್ದರಿಂದ ವ್ಯಕ್ತಿಯಲ್ಲಿ ಇಂತಹ ಲಕ್ಷಣಗಳಿದ್ದಲ್ಲಿ ಸೂಕ್ತ ಚಿಕಿತ್ಸೆಗಾಗಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕಳುಹಿಸಬೇಕು. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪಲು ಹಾಗೂ ಸಿಡಿಲು ಬಡಿತಕ್ಕೆ ಒಳಗಾದ ವ್ಯಕ್ತಿಯ ಆರೋಗ್ಯ ಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿ ನೀಡಬೇಕು. ಮತ್ತು ಸಿಡಿಲಿನ ಹೊಡತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಫಾಸ್ಟ್ ನ್ಯೂಸ್

## ಹರಿಹರ ಬಿಜೆಪಿ ಶಾಸಕರಿಗೆ ಜೀವ ಬೆದರಿಕೆ, ಕ್ರಮಕ್ಕೆ ಆಗ್ರಹ

» ದಾವಣಗೆರೆ

ಹರಿಹರ ಕ್ಷೇತ್ರದ ಬಿಜೆಪಿ ಶಾಸಕ ಬಿ.ಪಿ.ಹರೀಶ್ ಅವರಿಗೆ ಜೀವ ಬೆದರಿಕೆ ಹಾಕಿರುವ ಘಟನೆ ಮಂಗಳವಾರ ಬೆಳಗ್ಗೆ ದಾವಣಗೆರೆಯಲ್ಲಿ ನಡೆದಿದೆ. ತಮಗೆ ಜೀವ ಬೆದರಿಕೆ ಹಾಕಿರುವಂತಹ ವ್ಯಕ್ತಿಯನ್ನು ತಕ್ಷಣವೇ ಬಂಧಿಸಬೇಕು. ತಮಗೆ ಸೂಕ್ತ ರಕ್ಷಣೆ ನೀಡಬೇಕು ಹಾಗೂ ಹರಿಹರ ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಮರಳು, ಗಣಿಗಾರಿಕೆ ನಿಲ್ಲಿಸ ಬೇಕು ಎಂದು ಒತ್ತಾಯಿಸಿ ಜಿಲ್ಲಾ ರಕ್ಷಣಾಧಿಕಾರಿಗೆ ದೂರು ಸಲ್ಲಿಸಿದ್ದಾರೆ. ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎನ್.ರಾಜಶೇಖರ್ ನಾಗಪ್ಪ, ಹರಿಹರದ ಶಾಸಕ ಬಿ.ಪಿ.ಹರೀಶ್ ಅವರು ಹರಿಹರ ತಾಲೂಕಿನ ಚಿಕ್ಕಬಿದರಿ ಮತ್ತು ಹರಪನಹಳ್ಳಿ ತಾಲೂಕಿನ ವಟ್ಲಹಳ್ಳಿ ಗ್ರಾಮಗಳ ನಡುವೆ ನಡೆಯುತ್ತಿರುವ ಅಕ್ರಮ ಮರಳುಗಾರಿಕೆ ವಿಷಯದ ಬಗ್ಗೆ ಮಾಧ್ಯಮದವರನ್ನು ಸ್ಥಳಕ್ಕೆ ಕರೆದೊಯ್ದು ತೋರಿಸಿದ್ದರು. ಅಲ್ಲದೆ ಸಂಬಂಧಿತ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದಿದ್ದರು ಎಂದರು. ಮಂಗಳವಾರ ಬೆಳಗ್ಗೆ ವಾಯುವಿಹಾರ ಮುಗಿಸಿ ಶಾಸಕ ಹರೀಶ್ ಅವರು ಜಿಲ್ಲಾಸ್ಪತ್ರೆಯ ಸಮೀಪದ ಕಾಪಿ ಬಾರ್ ಬಳಿ ಇದ್ದಾಗ ಸ್ಥಳಕ್ಕೆ ಬಂದ ಅಮರಾವತಿಯ ಮಂಜುನಾಥ್ ಎಂಬುವರು, ಅಕ್ರಮ ಮರಳುಗಾರಿಕೆ ವಿಚಾರವನ್ನು ಅಧಿಕಾರಿಗಳಿಗೆ ತಿಳಿಸಿರುವ ನೀನು ಅದು ಯಾವ ಧೈರ್ಯದಿಂದ ಹರಿಹರಕ್ಕೆ ಬರುತ್ತೀಯಾ, ಯಾವುದೇ ಕಾರಣಕ್ಕೂ ನಿನ್ನನ್ನು ಉಳಿಸಲ್ಲ ಎಂದು ಜೀವಬೆದರಿಕೆ ಹಾಕಿದ್ದಾನೆ ಎಂದರು. ಈ ಬಗ್ಗೆ ಶಾಸಕ ಹರೀಶ್ ಜಿಲ್ಲಾ ರಕ್ಷಣಾಧಿಕಾರಿ ಅವರಿಗೆ ದೂರು ಸಲ್ಲಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಕೂಡಲೇ ಅಮರಾವತಿಯ ಮಂಜುನಾಥ್ ಎನ್ನುವರನ್ನು ಬಂಧಿಸ ಬೇಕು. ಶಾಸಕರಿಗೆ ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿ, ಓರ್ವ ಶಾಸಕರಿಗೆ ಸಾರ್ವಜನಿಕವಾಗಿ ಜೀವ ಬೆದರಿಕೆ ಹಾಕಿರುವುದನ್ನು ನೋಡಿದರೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ವಿಫಲವಾಗಿದೆ ಎಂದು ದೂರಿದರು. ಸುದ್ದಿಗೋಷ್ಠಿಯಲ್ಲಿ ಧನಂಜಯ ಕಡ್ಲೇಬಾಳು, ಅನಿಲ್ ಕುಮಾರ್ ನಾಯ್ಕ, ಐರಣಿ ಕುಮಾರ್, ಎಸ್.ಎಂ.ವೀರೇಶ್ ಹನಗವಾಡಿ, ಬಿ.ಎಂ.ಸತೀಶ್, ಎಚ್.ಎನ್.ಗುರುನಾಥ್, ಆರ್.ಎಲ್.ಶಿವಪ್ರಕಾಶ್, ಡಾ.ನಸೀರ್ ಅಹಮದ್, ಎಚ್.ಪಿ.ವಿಶ್ವಾಸ್ ಇದ್ದರು.

### ದಾವಣಗೆರೆ ಲೋಕಸಭಾ ಚುನಾವಣೆ

# ಮನೆಯಲ್ಲಿಯೇ ಮತದಾನ ಆರಂಭ

**ಆಯೋಗಕ್ಕೆ ಧನ್ಯವಾದ ಹೇಳಿದ ಮತದಾರರು –ಏಪ್ರಿಲ್ 27 ರ ವರೆಗೆ 2262 ಮತದಾರರು ಮನೆಯಲ್ಲೆ ಮತದಾನ**

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ಮನೆಯಲ್ಲಿಯೇ ಮತದಾನ ಪ್ರಕ್ರಿಯೆ ಆರಂಭವಾಗಿದ್ದು ಮತದಾರರಿಂದ ಅತ್ಯುತ್ತಮ ಸ್ಪಂದನೆ ಸಿಗುತ್ತಿದೆ. ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಿದ ಚುನಾವಣಾ ಆಯೋಗಕ್ಕೆ ಹಿರಿಯ ಮತದಾರರು ಧನ್ಯವಾದ ಸಲ್ಲಿಸಿದರು.

ದಾವಣಗೆರೆ ಲೋಕಸಭಾ ಕ್ಷೇತ್ರದ 8 ವಿಧಾನಸಭಾ ಕ್ಷೇತ್ರದಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರು ಮತ್ತು ವಿಶೇಷಚೇತನರು ಮನೆಯಿಂದಲೇ ಮತದಾನ ಮಾಡಲು ಏ.25 ರಿಂದ ಏ.27 ರ ವರೆಗೆ ಪ್ರಕ್ರಿಯೆ ನಡೆಯಲಿದೆ. ನೊಂದಾಯಿಸಿದ 2262 ಮತದಾರರ ಮನೆಬಾಗಿಲಿಗೆ ಚುನಾವಣಾ ಸಿಬ್ಬಂದಿಗಳು ತೆರಳಿ ಅಂಚೆ ಮತದಾನ ಮಾಡಿಸುವರು.



ಪ್ರತಿ ಮತದಾರರ ಮನೆಗೆ ಪಿಆರ್‌ಓ, ಸೆಕ್ಟರ್ ಅಧಿಕಾರಿ, ಮೈಕ್ರೋ ಅಬ್ಸರ್‌ವರ್, ಮತದಾನ ಅಧಿಕಾರಿ, ಬಿಎಲ್‌ಓ, ವೀಡಿಯೋಗ್ರಾಫರ್, ಪೋಲೀಸ್ ಸಿಬ್ಬಂದಿಗಳ ತಂಡ ತೆರಳಿ ಚುನಾವಣಾ ಆಯೋಗದ ಪ್ರಕಟಣೆಯನ್ನು ಓದುವ ಮೂಲಕ ಮತದಾರರಿಗೆ ತಿಳಿಸಿ ಮನೆಯಲ್ಲಿಯೇ ಮತದಾನ ಮಾಡಲು ಮತದಾರರ ವಹಿಗೆ ಸಹಿ, ನಮೂನೆ–13 ಕ್ಕೆ ಸಹಿ ಪಡೆದು, ಬ್ಯಾಲೇಟ್‌ನಲ್ಲಿರುವಂತೆ ಅಭ್ಯರ್ಥಿಗಳ ವಿವರ, ತಿಳಿಸಿಕೊಟ್ಟು ಮತಚಲಾಯಿಸುವ ವಿಧಾನದ ಬಗ್ಗೆ ತಿಳಿಸಿದ ನಂತರ ಮತದಾನ ಪ್ರಕ್ರಿಯೆ ಮತಹಾಕುವಾಗ ಕಾಣದಂತೆ ಮರೆ ಮಾಡುವ ಮೂಲಕ ಮತಚಲಾವಣೆಗೆ ಅನುವು ಮಾಡಿಕೊಡಲಾಗುತ್ತದೆ.

ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ಇವರಿಂದ ಮನೆಯಲ್ಲಿಯೇ ಮತದಾನ ವೀಕ್ಷಣೆ; ದಾವಣಗೆರೆ ಉತ್ತರ ಕ್ಷೇತ್ರದ ಮತಗಟ್ಟೆ 71 ರಲ್ಲಿ ಬರುವ ಎನ್.ಸುಮತಿಭಟ್ ಸುಮಾರು 90 ವರ್ಷ ಇವರು ವಯೋವೃದ್ದರಾಗಿದ್ದು ಮನೆಯಲ್ಲಿಯೇ ಮತದಾನ ಮಾಡಿದರು. ಮತ್ತು ಮತಗಟ್ಟೆ 75 ರಲ್ಲಿನ ವಿನೋದಬಾಯಿ.ಹೆಚ್, ವಿಶೇಷಚೇತನರು ಇವರು ಮನೆಯಲ್ಲಿಯೇ ಮತದಾನ ಮಾಡಿದರು. ಮನೆಯಲ್ಲಿ ಮತದಾನ ಮಾಡುವಾಗ ಮತದ ಗೌಪ್ಯತೆ ಮತ್ತು ಮಹತ್ವತೆಯನ್ನು ಕಾಪಾಡಿಕೊಳ್ಳಬೇಕು, ಈ ಬಗ್ಗೆ ವೀಕ್ಷಣೆ ಮಾಡಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಮನೆಯಲ್ಲಿಯೇ ಮತದಾನ ಮಾಡಿದ ಎನ್.ಸುಮತಿ ಭಟ್ ವರ ಅಭಿಪ್ರಾಯ ಕೇಳಿದಾಗ ನನಗೆ ತುಂಬಾ ಸಂತೋಷವಾಗಿದೆ, ಈವರೆಗೂ ಯಾವುದೇ ಚುನಾವಣೆಯಲ್ಲಿ ಮತ ಹಾಕುವುದನ್ನು ಬಿಟ್ಟಿಲ್ಲ, ಚುನಾವಣಾ ಆಯೋಗ ನನ್ನಂತಹ ಅನೇಕರಿಗೆ ಮನೆಯಲ್ಲಿ ಮತದಾನ ಮಾಡಲು ಅವಕಾಶ ಮಾಡಿಕೊಟ್ಟಿರುವುದು ಒಳ್ಳೆಯ ನಿರ್ಧಾರವಾಗಿದೆ ಎಂದದು ಸಂತೋಷ ವ್ಯಕ್ತಪಡಿಸಿ ಈ ಹಿಂದಿನ ಚುನಾವಣೆಗಳಲ್ಲಿ ಮತ ಚಲಾಯಿಸಲು ಬಿಟ್ಟಿಲ್ಲ, ಮಗ, ಸೊಸೆಯೊಂದಿಗೆ ಮತಗಟ್ಟೆಗೆ ಹೋಗಿ ಮತ ಹಾಕುತ್ತಿದ್ದೆ ಎಂದರು.

ಈ ವೇಳೆ ಸಹಾಯಕ ಚುನಾವಣಾಧಿಕಾರಿ ರೇಣುಕಾ, ಇಸ್ಮಾಯಿಲ್, ಚುನಾವಣಾ ಸಿಬ್ಬಂದಿಗಳಾದ ನಾಗರಾಜಪ್ಪ, ಶೌಕತ್ ಅಲಿ, ಸೆಕ್ಟರ್ ಅಧಿಕಾರಿ ಶಾಂತನಾಯ್ಕ, ಮೈಕ್ರೋ ಅಬ್ಸರ್‌ವರ್ ಸುಜಿತ್ ಎಸ್.ವಿ, ಬಿ.ಎಲ್.ಓ ಅಂಜಲಿ ಉಪಸ್ಥಿತರಿದ್ದರು.

ಮನೆಯಲ್ಲಿ ಮತದಾನ ಮಾಡುವವರು; ಕ್ಷೇತ್ರದಲ್ಲಿ ವಿಶೇಷಚೇತನರು 804, ಹಿರಿಯ ನಾಗರಿಕರಾದ 85 ವರ್ಷ ಮೇಲ್ಪಟ್ಟವರು 1458 ಮತದಾರರು ನೊಂದಾಯಿಸಿದ್ದು ಏ.27 ರವರೆಗೆ ಮನೆಯಲ್ಲಿಯೇ ಮತದಾನ ಮಾಡುವರು.

### ದೋಸಾ ಕಾವಲಿಯಲ್ಲಿ ಮೂಡಿದ ಮತದಾನ ಜಾಗೃತಿ

## ಬೆಣ್ಣೆ ನಗರಿಯಲ್ಲಿ ಅಕ್ಷರ ದೋಸೋತ್ಸವ

» ದಾವಣಗೆರೆ

ದಾವಣಗೆರೆ ಬೆಣ್ಣೆ ನಗರಿ, ಬೆಣ್ಣೆ ದೋಸೆ ಎಂದೇ ಬ್ರಾಂಡ್ ಪಡೆದುಕೊಂಡಿದೆ. ದೋಸೆ ಕಾವಲಿಯಲ್ಲಿ ದೋಸೆಯ ಹಿಟ್ಟನ್ನು ಬಳಸಿ ನಮ್ಮ ಮತ, ನನ್ನ ಹಕ್ಕು, ತಪ್ಪದೇ ಮೇ 7 ರಂದು ಮತದಾನ ಮಾಡಿ ಎಂಬ ಘೋಷಣೆಯನ್ನು ಕಾವಲಿಯಲ್ಲಿ ದೋಸೆಯಲ್ಲಿ ಮೂಡಿ ಬಂದಿತು.

ಗುರುವಾರ ಜಯದೇವ ವೃತ್ತದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಸ್ವೀಪ್ ಸಮಿತಿಯಿಂದ ಏರ್ಪಡಿಸಲಾದ ದೋಸೆಯ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ನನ್ನ ಮತ, ನನ್ನ ಹಕ್ಕು ಮತ್ತು ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ಮೈ ವೋಟ್, ಮೈ ವಾಯ್ಸ್ ಮೇ7 ಎಂದು ದೋಸೆ ಹಿಟ್ಟಿನಲ್ಲಿ ಬಿಡಿಸುವ ಮೂಲಕ ಜಾಗೃತಿ ಮೂಡಿಸಿದರು.

ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಮಾತನಾಡಿ ಅಕ್ಷರ ದೋಸೋತ್ಸವದ ಮೂಲಕ ಮತದಾನ ಜಾಗೃತಿ ಮೂಡಿಸಲಾಗುತ್ತಿದೆ. ದಾವಣಗೆರೆ ಉತ್ತರ, ದಕ್ಷಿಣ ಕ್ಷೇತ್ರದಲ್ಲಿ ಈ ಭಾರಿಯ ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಮತದಾನವಾಗಬೇಕೆಂಬ ಗುರಿ ನಮ್ಮದಾಗಿದೆ ಎಂದರು. ಈ ವೇಳೆ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ; ಚಂದ್ರಶೇಖರ್ ಸುಂಕದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.







Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T